ಕರ್ನಾಟಕ ಸರ್ಕಾರ

ಅರಣ್ಯಇಲಾಖೆ

ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ/ ಹಾಗೂ ಆಯ್ಕೆ ಪ್ರಾಧಿಕಾರ, ಕಲಬುರಗಿ ವೃತ್ತ, ಕಲಬುರಗಿ
ಎಸ್.ಬಿ. ಟೆಂಪಲ್ ರೋಡ್, ಜಿಲ್ಲಾ ನ್ಯಾಯಾಲಯ ಹತ್ತಿರ, ಅರಣ್ಯ ಭವನ, ಕಲಬುರಗಿ

# ಅಧಿಸೂಚನೆ

**ಸಂಖ್ಯೆ: ಎ5/ಸಿಬ್ಬಂದಿ/ಅವೀ/ನೆನೇ/ಸಿಆರ್-75/2026-27 ದಿನಾಂಕ: 20.07.2026**

**2026-27ನೇ ಸಾಲಿನಲ್ಲಿ 06 (ಆರು) ಅರಣ್ಯ ವೀಕ್ಷಕ ಗ್ರೂಪ್ 'ಡಿ' ಹುದ್ದೆಗಳಿಗೆ ನೇರ ನೇಮಕಾತಿ**

ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಾವಳಿಗಳು 2021 ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: FEE 203 FEG 2015 ದಿನಾಂಕ: 06.08.2019ರ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2019 ರನ್ವಯ ಕರ್ನಾಟಕ ಅರಣ್ಯ ಇಲಾಖೆಯ ಕಲಬುರಗಿ ವೃತ್ತದಲ್ಲಿ ಖಾಲಿ ಇರುವ **06 (04 ಹುದ್ದೆಗಳು + 02 ಹಿಂಬಾಕಿ ಹುದ್ದೆಗಳು)** ಅರಣ್ಯ ವೀಕ್ಷಕ ಗ್ರೂಪ್ 'ಡಿ' ಹುದ್ದೆಗಳನ್ನು [ಸರ್ಕಾರದ ಪತ್ರ ಸಂಖ್ಯೆ: ಎಫ್‌ಇಇ 145 ಎಫ್‌ಎನ್‌ಜಿ 2024, ದಿನಾಂಕ: 11.05.2026 ರಲ್ಲಿ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 633 ಎಫ್ ಆರ್‌ಸಿ 2024, ದಿನಾಂಕ: 27.04.2026 ರನ್ವಯ ಅರಣ್ಯ ಇಲಾಖೆಯಲ್ಲಿ ಖಾಲಿ ಇರುವ ಒಟ್ಟು 750 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿಮಾಡಿಕೊಳ್ಳಲು ಸರ್ಕಾರವು ಸಹಮತಿಸಿರುವುದು ಅರಣ್ಯ ಇಲಾಖೆಯ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಇವರ ಅಧಿಸೂಚನೆ ಸಂಖ್ಯೆ: **ಎ5/ಸಿಬ್ಬಂದಿ/ಅವೀ/ನೆನೇ/ಸಿಆರ್-21/2022-23** ದಿನಾಂಕ: 15.09.2023ರ 23 ಅರಣ್ಯ ವೀಕ್ಷಕ ಹುದ್ದೆಗಳಿಗೆ ನೇರ ನೇಮಕಾತಿಗೆ ಸಂಬಂಧಿಸಿದಂತೆ ವಿವಿಧ ಪ್ರವರ್ಗದಡಿ ಅರ್ಹ ಅಭ್ಯರ್ಥಿಗಳ ಕೊರತೆಯಿಂದ ಭರ್ತಿಯಾಗದೆ ಉಳಿದ **02** ಹಿಂಬಾಕಿ ಹುದ್ದೆಗಳು] ನೇರ ನೇಮಕಾತಿ ಮೂಲಕ ಭರ್ತಿಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಈ ಮೂಲಕ ಆಹ್ವಾನಿಸಲಾಗಿದೆ.

1. **ಅರ್ಜಿಸಲ್ಲಿಸುವವಿಧಾನ:**

1.1. ಈ ನೇರ ನೇಮಕಾತಿ ಅಧಿಸೂಚನೆಯನ್ನು ಕರ್ನಾಟಕ ಅರಣ್ಯ ಇಲಾಖೆಯ ಅಧಿಕೃತ ಜಾಲತಾಣ **https://aranya.gov.in/** ಮುಖಪುಟದ ಕೆಳಭಾಗದಲ್ಲಿ ಇರುವ **"ನೇಮಕಾತಿ"** ಶೀರ್ಷಿಕೆಯಡಿ ಪ್ರಕಟಿಸಲಾಗಿದೆ. ಅರ್ಜಿ ಸಲ್ಲಿಸಲು ಇಚ್ಛಿಸುವ ಅರ್ಹ ಅಭ್ಯರ್ಥಿಗಳು ತಮ್ಮ ಅರ್ಜಿಯನ್ನು ಸದರಿ ಆನ್‌ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ವ್ಯವಸ್ಥೆಯ ಮೂಲಕ ಮಾತ್ರ ಸಲ್ಲಿಸತಕ್ಕದ್ದು. **ಈ ವಿಧಾನವನ್ನು ಹೊರತು ಪಡಿಸಿ ಬೇರೆ ಯಾವುದೇ ವಿಧಾನದಲ್ಲಿ ಅರ್ಜಿಯನ್ನು ಸಲ್ಲಿಸಲು ಅವಕಾಶವಿರುವುದಿಲ್ಲ.**

1.2. ಅರ್ಜಿಯನ್ನು ಭರ್ತಿ ಮಾಡುವ ಮೊದಲು ಅಭ್ಯರ್ಥಿಗಳು **ಈ ಅಧಿಸೂಚನೆಯಲ್ಲಿನ ಸೂಚನೆ/ನಿರ್ದೇಶನ ಹಾಗೂ ಷರತ್ತುಗಳನ್ನು**, ಅಲ್ಲದೆ, **ಈ ಅಧಿಸೂಚನೆಯೊಂದಿಗೆ ಲಗತ್ತಿಸಿದ ಸರ್ಕಾರದ ಅಧಿಸೂಚನೆ ಸಂಖ್ಯೆ: FEE 203 FEG 2015 ದಿನಾಂಕ: 06.08.2019ರಲ್ಲಿ ಅಧಿಸೂಚಿತ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಾವಳಿ 2019ನ್ನು ಕೂಲಂಕಷವಾಗಿ ಓದಿ ಸಮರ್ಪಕವಾಗಿ ಅರ್ಥೈಸಿಕೊಂಡು** ತಮಗೆ ಅನ್ವಯವಾಗುವ ವಿವರಗಳನ್ನು ಆನ್‌ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ಅರ್ಜಿಯ ನಿಗದಿತ ಅಂಕಣದಲ್ಲಿ ಭರ್ತಿಮಾಡತಕ್ಕದ್ದು. ಅಭ್ಯರ್ಥಿಗಳು ಭರ್ತಿಮಾಡಿದ ಆನ್‌ಲೈನ್ ಅರ್ಜಿಯ ಪ್ರತಿಯನ್ನು ಮುದ್ರಿಸಿ ಮಾಹಿತಿಗಾಗಿ ತಮ್ಮ ಬಳಿ ಇಟ್ಟುಕೊಳ್ಳತಕ್ಕದ್ದು. ಅಲ್ಲದೆ, ಆನ್‌ಲೈನ್ ಅರ್ಜಿಯ ಪ್ರತಿಯನ್ನು ಅಂಚೆ ಮುಖಾಂತರ ಅಥವಾ ಮುದ್ದಾಂ ಆಗಿ ಇಲಾಖೆಗೆ ಸಲ್ಲಿಸಬೇಕಾದ ಅವಶ್ಯಕತೆ/ಅವಕಾಶ ಇರುವುದಿಲ್ಲ.

[**ವಿಶೇಷಸೂಚನೆ:** ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿನ ವಿವರಗಳನ್ನು ತಿದ್ದುಪಡಿ/ಸೇರ್ಪಡೆ ಮಾಡಲು ಅವಕಾಶವಿರುವುದಿಲ್ಲ ಹಾಗೂ ಇಂತಹ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.]

1.3. ಅಭ್ಯರ್ಥಿಯು ತನ್ನ ಸ್ವಂತ ಆಧಾರ್ (UID) ಸಂಖ್ಯೆಯನ್ನು ಮಾತ್ರ ಆನ್‌ಲೈನ್ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಬಳಸತಕ್ಕದ್ದು. ಒಂದು ವೇಳೆ, ಒಂದೇ ಅಭ್ಯರ್ಥಿಯು **ಬೇರೆಯವರ ಆಧಾರ್ (UID) ಸಂಖ್ಯೆಯನ್ನು ಬಳಸಿ ಅರ್ಜಿ ಸಲ್ಲಿಸಿರುವುದು** ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ **ಕಂಡುಬಂದಲ್ಲಿ ಅಂತಹ ಅರ್ಜಿಯನ್ನು ತಿರಸ್ಕರಿಸಿ, ನೇಮಕಾತಿ ಪ್ರಕ್ರಿಯೆಯಿಂದ ತಕ್ಷಣ ಕೈಬಿಡಲಾಗುವುದು** ಹಾಗೂ ಇದಕ್ಕೆ ಅಭ್ಯರ್ಥಿಯೇ ಹೊಣೆಗಾರರಾಗಿರುತ್ತಾರೆ. ಅಲ್ಲದೆ, ಆಯ್ಕೆ ಪ್ರಾಧಿಕಾರವು ಅಥವಾ ನೇಮಕಾತಿ ಪ್ರಾಧಿಕಾರವು ಅಧಿಕೃತಗೊಳಿಸಿದ ಅಧಿಕಾರಿಯು ಇಂತಹ ಅಭ್ಯರ್ಥಿಯನ್ನು ಕರ್ನಾಟಕ ಅರಣ್ಯ ಇಲಾಖೆಯಲ್ಲಿನ ನೇಮಕಾತಿಗಳಿಗೆ 10 ವರ್ಷಗಳ ಅವಧಿವರೆಗೂ ಅನರ್ಹ (Debar) ಮಾಡಲಾಗುವುದು.

1.4. ಜನ್ಮ ದಿನಾಂಕ ದೃಢೀಕರಿಸುವ ಪ್ರಮಾಣಪತ್ರ, ನಿಗದಿತ ಶೈಕ್ಷಣಿಕ ವಿದ್ಯಾರ್ಹತೆಯ ಪ್ರಮಾಣಪತ್ರಗಳು ಹಾಗೂ ನಿಗದಿತ ಜಾತಿ/ ಪ್ರವರ್ಗ/ ಗ್ರಾಮೀಣ ಅಭ್ಯರ್ಥಿ/ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದಅಭ್ಯರ್ಥಿ/ ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ/ ಮಾಜಿ ಸೈನಿಕ ಅಭ್ಯರ್ಥಿ/ ತೃತೀಯ ಲಿಂಗ ಅಭ್ಯರ್ಥಿ/ ಅಂಗವಿಕಲ ಅಭ್ಯರ್ಥಿ/ ಸ್ಥಳೀಯ ಅರಣ್ಯ ಬುಡಕಟ್ಟು ಪರಿಶಿಷ್ಟ ಪಂಗಡ ಅಭ್ಯರ್ಥಿ ಇತ್ಯಾದಿ ದೃಢೀಕರಣ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ಮಾಡಿ ಆನ್‌ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ಅರ್ಜಿ ಸಲ್ಲಿಸುವ ವೇಳೆಯಲ್ಲಿ ಅಪ್‌ಲೋಡ್ಮಾಡತಕ್ಕದ್ದು. **ಅಭ್ಯರ್ಥಿಯು ಯಾವ ಪ್ರಮಾಣ ಪತ್ರ/ ದಾಖಲೆಗಳನ್ನು ಅರ್ಜಿಸಲ್ಲಿಸುವ ವೇಳೆ ಅಪ್‌ಲೋಡ್ಮಾಡಿರುತ್ತಾರೆಯೋ ಅದೇ ಪ್ರಮಾಣ ಪತ್ರ/ ದಾಖಲೆಗಳನ್ನು ಆಯ್ಕೆ ಪ್ರಕ್ರಿಯೆಯ ಎಲ್ಲಾ ಹಂತಗಳಲ್ಲಿಯೂ ಪರಿಗಣನೆಗೆ ತೆಗೆದು ಕೊಳ್ಳಲಾಗುವುದು. ಇದನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.**

1.5. **ಅರ್ಜಿ/ಶುಲ್ಕ ಸ್ವೀಕೃತಿ ಕಾಲಮಿತಿ:**

| | |
|---|---|
| ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಪ್ರಾರಂಭಿಕ ದಿನಾಂಕ | 01.08.2026 (00:00:01 ಸಮಯದಿಂದ) |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 31.08.2026 (23:59:59 ಸಮಯದವರೆಗೆ) |
| ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ | 02.09.2026 |

1.6. **ಅರ್ಜಿ ಶುಲ್ಕ:**

**ಸಾಮಾನ್ಯ ಅರ್ಹತೆ, ಪ್ರವರ್ಗ IIಎ, II ಬಿ, III ಎ ಮತ್ತು III ಬಿ ಪ್ರವರ್ಗಗಳಿಗೆ ಸೇರಿದ**
- **ಪುರುಷ ಅಭ್ಯರ್ಥಿಗಳಿಗೆ** –ಅರ್ಜಿ ಶುಲ್ಕ: ರೂ. 200/-
- **ಮಹಿಳಾ ಅಭ್ಯರ್ಥಿಗಳಿಗೆ/ತೃತೀಯಲಿಂಗ ಅಭ್ಯರ್ಥಿಗಳಿಗೆ** –ಅರ್ಜಿ ಶುಲ್ಕ: ರೂ. 100/-

**ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ - I ಕ್ಕೆ ಸೇರಿದ**
- **ಪುರುಷ ಅಭ್ಯರ್ಥಿಗಳಿಗೆ** –ಅರ್ಜಿ ಶುಲ್ಕ: ರೂ. 100/-
- **ಮಹಿಳಾ ಅಭ್ಯರ್ಥಿಗಳಿಗೆ/ ತೃತೀಯ ಲಿಂಗ ಅಭ್ಯರ್ಥಿಗಳಿಗೆ** –ಅರ್ಜಿ ಶುಲ್ಕ: ರೂ. 50/-

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 431 ಸೇನೆನಿ 2016 ದಿನಾಂಕ: 28.12.2016 ರನ್ವಯ **ಅಂಗವಿಕಲ ಅಭ್ಯರ್ಥಿಗಳಿಗೆ** ಅರ್ಜಿ ಶುಲ್ಕದಿಂದ ವಿನಾಯಿತಿ ನೀಡಲಾಗಿದೆ.

**ಅರ್ಜಿ ಶುಲ್ಕ ಪಾವತಿ ವಿಧಾನ:**

- ಅಭ್ಯರ್ಥಿಗಳು ಆನ್‌ಲೈನ್ (Online) ಮೂಲಕಅರ್ಜಿಯನ್ನು ಸಲ್ಲಿಸಿದ ನಂತರ ಅರ್ಜಿ ಶುಲ್ಕವನ್ನು ಆನ್‌ಲೈನ್ ಮೂಲಕ ಲಭ್ಯ ಮಾಡಲಾಗಿರುವ ಪಾವತಿ ಲಿಂಕ್‌ಗಳನ್ನು ಬಳಸಿ ಶುಲ್ಕವನ್ನು ಸಂದಾಯ ಮಾಡತಕ್ಕದ್ದು. ಆನ್‌ಲೈನ್ ಶುಲ್ಕದ ಪಾವತಿಯ ಬಗ್ಗೆ

ಪೋರ್ಟಲ್ ನಲ್ಲಿ ಆಯ್ಕೆಗಳು ಲಭ್ಯವಿದ್ದು, ಅಭ್ಯರ್ಥಿಯು ಆನ್‌ಲೈನ್ ಮೂಲಕ ಅರ್ಜಿ ಶುಲ್ಕವನ್ನು **UPI/NEFT/Credit Card/ Debit Card/ Internet Banking** ಮೂಲಕ ಪಾವತಿಸಬಹುದಾಗಿದೆ. ಆನ್‌ಲೈನ್ ಮೂಲಕ ಅರ್ಜಿಶುಲ್ಕವನ್ನು ಅರ್ಜಿ ಸಲ್ಲಿಸಲು ನಿಗದಿ ಪಡಿಸಲಾಗಿರುವ ಕೊನೆಯ ದಿನಾಂಕದ ಒಳಗಾಗಿ ಪಾವತಿಸತಕ್ಕದ್ದು.

- ನಗದು ಮೂಲಕ ಅರ್ಜಿ ಶುಲ್ಕವನ್ನು ಅಭ್ಯರ್ಥಿಯು ಪಾವತಿಸಲು ಬಯಸಿದ್ದಲ್ಲಿ, ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿದ ನಂತರ ಅರ್ಜಿ ಶುಲ್ಕವನ್ನು ನಗದಿನ (Cash) ರೂಪದಲ್ಲಿ ಸಂದಾಯ ಮಾಡುವ ಆಯ್ಕೆಯನ್ನು ನಮೂದಿಸಿ, ಹಾಗೂ ಆನ್‌ಲೈನ್ಮೂಲಕ ಸ್ವೀಕೃತವಾಗುವ ಚಲನ್ ಪ್ರತಿಯನ್ನು ಡೌನ್‌ಲೋಡ್ ಮಾಡಿ ಮುದ್ರಿಸಿಕೊಂಡ ನಂತರ ಸದರಿ ಚಲನನ್ನು **"ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ", "ಕೆನರಾ ಬ್ಯಾಂಕ್", "ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ"** ಅಥವಾ **"ಸೆಂಟ್ರಲ್ ಬ್ಯಾಂಕ್ಆಫ್ ಇಂಡಿಯಾ"** ನ ಯಾವುದೇ ಶಾಖೆಯಲ್ಲಿ ಸಲ್ಲಿಸಿ ನಗದು ಮೂಲಕ ಅರ್ಜಿ ಶುಲ್ಕವನ್ನು ಪಾವತಿಸಬಹುದಾಗಿದೆ.
- ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಕೊನೆಯ ದಿನಾಂಕಕ್ಕೆ ಮುಂಚಿತವಾಗಿ ಅಥವಾ ಕೊನೆಯ ದಿನಾಂಕದ ನಂತರದ ಎರಡು ದಿನಗಳ ಒಳಗೆ ಮೇಲೆ ನಮೂದಿಸಿದ ಬ್ಯಾಂಕ್‌ಗಳ ಯಾವುದೇ ಶಾಖೆಯಲ್ಲಿ ಅರ್ಜಿ ಶುಲ್ಕವನ್ನು ಪಾವತಿಸತಕ್ಕದ್ದು, ಒಂದು ವೇಳೆ ಶುಲ್ಕ ಪಾವತಿಯ ಕೊನೆಯ ದಿನಾಂಕವು ಸಾರ್ವತ್ರಿಕ ರಜಾದಿನವಾಗಿ ಘೋಷಿಸಲ್ಪಟ್ಟರೆ, ಆ ದಿನಾಂಕದ ಮಾರನೆಯ ಕೆಲಸದ ದಿನವು ಕೊನೆಯ ದಿನಾಂಕವನ್ನಾಗಿ ಪರಿಗಣಿಸಬಹುದಾಗಿರುತ್ತದೆ. ಸದರಿ ದಿನಾಂಕದ ನಂತರ ಅರ್ಜಿ ಶುಲ್ಕವನ್ನು ಪಾವತಿಸಲು ಯಾವುದೇ ಅವಕಾಶವಿರುವುದಿಲ್ಲ.

ಅಭ್ಯರ್ಥಿಗಳು ಒಮ್ಮೆ ಪಾವತಿಸಲಾದ ಅರ್ಜಿ ಶುಲ್ಕವನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ **ಅಥವಾ** ಅದನ್ನು ಅರಣ್ಯ ಇಲಾಖೆಯು ನಡೆಸುವ ಇತರೆ ಯಾವುದೇ ಪರೀಕ್ಷೆ **ಅಥವಾ** ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ನಿಗದಿತ ಶುಲ್ಕವನ್ನು ನಿಗದಿತ ಅವಧಿಯೊಳಗಾಗಿ ಸಂದಾಯ ಮಾಡದಿದ್ದಲ್ಲಿ, ಅಂತಹ ಅರ್ಜಿಗಳನ್ನು ಅಪೂರ್ಣ ಎಂದು ಪರಗಣಿಸಿ ತಿರಸ್ಕರಿಸಲಾಗುವುದು.

**ವಿಶೇಷ ಸೂಚನೆ:**

ಅಭ್ಯರ್ಥಿಗಳು ಆನ್‌ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರವೇ ಕಡ್ಡಾಯವಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದು. ಇದನ್ನು ಹೊರತುಪಡಿಸಿ, ನೇರವಾಗಿ/ಕೊರಿಯರ್/ ನೊಂದಾಯಿತ ಅಂಚೆ/ಸಾಧಾರಣ ಅಂಚೆ/ ಇ-ಮೇಲ್/ಮುದ್ದಾಂ/ಇತ್ಯಾದಿ ಯಾವುದೇ ಇತರೆ ವಿಧಾನಗಳ ಮುಖಾಂತರ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಲ್ಲದೆ, ಈ ಮೇಲೆ ನಮೂದಿಸಿದಂತೆ ಅರ್ಜಿಶುಲ್ಕ ಪಾವತಿ ವಿಧಾನವನ್ನು ಹೊರತುಪಡಿಸಿ, ಬೇರೆ ಇತರೆ ವಿಧಾನ (ಡಿಡಿ/ ಚೆಕ್/ ಪೋಸ್ಟಲ್ ಆರ್ಡರ್/ ಇತ್ಯಾದಿ)ವನ್ನು ಪರಿಗಣಿಸಲಾಗುವುದಿಲ್ಲ. **ಇದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರ/ಹೊಣೆಗಾರರಾಗಿರುತ್ತಾರೆ.**

2. **ಅರಣ್ಯ ವೀಕ್ಷಕ ವೃಂದದ ಹುದ್ದೆಗಳವಿವರ:**

2.1. **ವೇತನ ಶ್ರೇಣಿ: ರೂ. 29600-725-32500-800-35700-900-39300-1000-43300-1125-47800-1250-52800**

2.2. ಖಾಲಿ ಹುದ್ದೆಗಳ ವಿಭಾಗವಾರು ವರ್ಗೀಕರಣ:

| ಕ್ರ. ಸಂ. | ವಿಭಾಗ | ಹುದ್ದೆಗಳ ಸಂಖ್ಯೆ |
|---|---|---|
| 1 | ಬೀದರ ಪ್ರಾದೇಶಿಕ ಅರಣ್ಯ ವಿಭಾಗ | 1 |
| 2 | ಯಾದಗಿರಿ ಪ್ರಾದೇಶಿಕ ಅರಣ್ಯ ವಿಭಾಗ | 2 |
| 3 | ರಾಯಚೂರ ಪ್ರಾದೇಶಿಕ ಅರಣ್ಯ ವಿಭಾಗ | 1 |
| | ಒಟ್ಟು | **4** |

2.3. **ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಇವರ ಅಧಿಸೂಚನೆ ಸಂಖ್ಯೆ: ಎ5/ಸಿಬ್ಬಂದಿ/ಅವೀ/ನೆನೇ/ಸಿಆರ್-21/2022-23 ದಿನಾಂಕ: 15.09.2023 ರ 23 ಅರಣ್ಯ ವೀಕ್ಷಕ ಹುದ್ದೆಗಳಿಗೆ ನೇರ ನೇಮಕಾತಿಗೆ ಸಂಬಂಧಿಸಿದಂತೆ ವಿವಿಧ ಪ್ರವರ್ಗದಡಿ ಅರ್ಹ ಅಭ್ಯರ್ಥಿಗಳ ಕೊರತೆಯಿಂದ ಭರ್ತಿಯಾಗದೆ ಉಳಿದ ಹಿಂಬಾಕಿ ಹುದ್ದೆಗಳ ವಿಭಾಗವಾರು ವಿವರ:**

| ಕ್ರ. ಸಂ. | ವಿಭಾಗ | ಹಿಂಬಾಕಿ ಹುದ್ದೆಗಳು | |
|---|---|---|---|
| | | ಪ್ರವರ್ಗ | ಸಂಖ್ಯೆ |
| 1 | ಕಲಬುರಗಿ ಪ್ರಾದೇಶಿಕ ಅರಣ್ಯ ವಿಭಾಗ | HK-GM | 1 |
| | | HK-GEN-PH | 1 |
| | | TOTAL | 2 |

**2.4. ಹುದ್ದೆಗಳ ಪ್ರವರ್ಗವಾರು ಮೀಸಲಾತಿ ವರ್ಗೀಕರಣ:**

ಅರಣ್ಯ ವೀಕ್ಷಕ ಖಾಲಿ ಹುದ್ದೆಗಳಿಗೆ ಅಧಿಸೂಚಿಸಿರುವ ವಿಭಾಗಕ್ಕೆ ಸಂಬಂಧಿಸಿದಂತೆ ಪ್ರವರ್ಗವಾರು ಮೀಸಲಾತಿ ವರ್ಗೀಕರಣ ಈ ಕೆಳಕಂಡಂತಿದೆ.

**2.4.1** ಬೀದರ ಪ್ರಾದೇಶಿಕ ಅರಣ್ಯ ವಿಭಾಗದ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವೃಂದದ **01** ಹುದ್ದೆ

| ಪ್ರವರ್ಗ | ಸಮತಳಮೀಸಲಾತಿ | | | | | | | | ಒಟ್ಟು |
|---|---|---|---|---|---|---|---|---|---|
| | ಇತರೆ | ಮಾಜಿಸೈನಿಕಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಯೋಜನೆಗಳಿಂದನಿರಾಶ್ರಿತಗೊಂಡಅಭ್ಯರ್ಥಿ | ಕನ್ನಡಮಾಧ್ಯಮದಲ್ಲಿವ್ಯಾಸಂಗಮಾಡಿದಅಭ್ಯರ್ಥಿ | ಗ್ರಾಮೀಣಅಭ್ಯರ್ಥಿ | ತೃತೀಯಲಿಂಗಅಭ್ಯರ್ಥಿ | ಸ್ಥಳೀಯರಲ್ಲಿಯಬುಡಕಟ್ಟುಪರಿಶಿಷ್ಟಪಂಗಡದ ಅಭ್ಯರ್ಥಿ | |
| ಸಾಮಾನ್ಯಅರ್ಹತೆ | 1 | - | - | -- | - | - | - | - | **1** |
| ಪರಿಶಿಷ್ಟಜಾತಿ | - | - | - | - | - | - | - | - | - |
| ಪರಿಶಿಷ್ಟಪಂಗಡ | - | - | - | - | - | - | - | - | - |
| ಪ್ರವರ್ಗ – I | - | - | - | - | - | - | - | - | - |
| ಪ್ರವರ್ಗ – IIಎ | - | - | - | - | - | - | - | - | - |
| ಪ್ರವರ್ಗ – IIಬಿ | - | - | - | - | - | - | - | - | - |
| ಪ್ರವರ್ಗ – IIIಎ | - | - | - | - | - | - | - | - | - |
| ಪ್ರವರ್ಗ – IIIಬಿ | - | - | - | - | - | - | - | - | - |
| **ಒಟ್ಟು** | 1 | - | - | - | - | - | - | - | 1 |

**2.4.2 ಯಾದಗಿರಿ** ಪ್ರಾದೇಶಿಕ ಅರಣ್ಯ ವಿಭಾಗದ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವೃಂದದ **02 ಹುದ್ದೆಗಳು**

| ಪ್ರವರ್ಗ | ಸಮತಳಮೀಸಲಾತಿ | | | | | | | | ಒಟ್ಟು |
|---|---|---|---|---|---|---|---|---|---|
| | ಇತರೆ | ಮಾಜಿಸೈನಿಕಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಯೋಜನೆಗಳಿಂದನಿರಾಶ್ರಿತಗೊಂಡಅಭ್ಯರ್ಥಿ | ಕನ್ನಡಮಾಧ್ಯಮದಲ್ಲಿ ವ್ಯಾಸಂಗಮಾಡಿದಅಭ್ಯರ್ಥಿ | ಗ್ರಾಮೀಣಅಭ್ಯರ್ಥಿ | ತೃತೀಯಲಿಂಗಅಭ್ಯರ್ಥಿ | ಸ್ಥಳೀಯಅರಣ್ಯಬುಡಕಟ್ಟುಪರಿಶಿಷ್ಟಪಂಗಡದ ಅಭ್ಯರ್ಥಿ | |
| ಸಾಮಾನ್ಯಅರ್ಹತೆ | | - | 1 | -- | - | - | - | - | 1 |
| ಪರಿಶಿಷ್ಟಜಾತಿ | - | - | - | - | - | - | - | - | - |
| ಪರಿಶಿಷ್ಟಪಂಗಡ | - | - | - | - | - | - | - | - | - |
| ಪ್ರವರ್ಗ – I | - | - | - | - | - | - | - | - | - |
| ಪ್ರವರ್ಗ – IIಎ | 1 | - | - | - | - | - | - | - | 1 |
| ಪ್ರವರ್ಗ – IIಬಿ | - | - | - | - | - | - | - | - | - |
| ಪ್ರವರ್ಗ – IIIಎ | - | - | - | - | - | - | - | - | - |
| ಪ್ರವರ್ಗ – IIIಬಿ | - | - | - | - | - | - | - | - | - |
| ಒಟ್ಟು | 1 | - | 1 | - | - | - | - | - | 2 |

**2.4.3 ರಾಯಚೂರ** ಪ್ರಾದೇಶಿಕ ಅರಣ್ಯ ವಿಭಾಗದ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವೃಂದದ **01 ಹುದ್ದೆ**

| ಪ್ರವರ್ಗ | ಸಮತಳಮೀಸಲಾತಿ | | | | | | | | ಒಟ್ಟು |
|---|---|---|---|---|---|---|---|---|---|
| | ಇತರೆ | ಮಾಜಿಸೈನಿಕಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಯೋಜನೆಗಳಿಂದನಿರಾಶ್ರಿತಗೊಂಡಅಭ್ಯರ್ಥಿ | ಕನ್ನಡಮಾಧ್ಯಮದಲ್ಲಿ ವ್ಯಾಸಂಗಮಾಡಿದಅಭ್ಯರ್ಥಿ | ಗ್ರಾಮೀಣಅಭ್ಯರ್ಥಿ | ತೃತೀಯಲಿಂಗಅಭ್ಯರ್ಥಿ | ಸ್ಥಳೀಯಅರಣ್ಯಬುಡಕಟ್ಟುಪರಿಶಿಷ್ಟಪಂಗಡದ ಅಭ್ಯರ್ಥಿ | |
| ಸಾಮಾನ್ಯಅರ್ಹತೆ | 1 | - | - | -- | - | - | - | - | 1 |
| ಪರಿಶಿಷ್ಟಜಾತಿ | - | - | - | - | - | - | - | - | - |
| ಪರಿಶಿಷ್ಟಪಂಗಡ | - | - | - | - | - | - | - | - | - |
| ಪ್ರವರ್ಗ – I | - | - | - | - | - | - | - | - | - |
| ಪ್ರವರ್ಗ – IIಎ | - | - | - | - | - | - | - | - | - |
| ಪ್ರವರ್ಗ – IIಬಿ | - | - | - | - | - | - | - | - | - |
| ಪ್ರವರ್ಗ – IIIಎ | - | - | - | - | - | - | - | - | - |
| ಪ್ರವರ್ಗ – IIIಬಿ | - | - | - | - | - | - | - | - | - |
| ಒಟ್ಟು | 1 | - | - | - | - | - | - | - | 1 |

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ದಿನಾಂಕ: 13.05.2026, ಸರ್ಕಾರದ ತಿದ್ದುಪಡಿ ಆದೇಶ ದಿನಾಂಕ: 18.05.2026, ಸರ್ಕಾರದ ನಡವಳಿ ದಿನಾಂಕ: 22.05.2026 ಹಾಗೂ ಸರ್ಕಾರದ ಆದೇಶ ದಿನಾಂಕ: 25.05.2026 ರನ್ವಯ ಮಾನ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶದ ಹಿನ್ನಲೆಯಲ್ಲಿ, ಪರಿಶಿಷ್ಟ ಜಾತಿಗಳ ಮೀಸಲಾತಿಯನ್ನು ತಾತ್ಕಾಲಿಕವಾಗಿ ಶೇ. 17 ರಿಂದ ಶೇ. 15 ಕ್ಕೆ ಸೀಮಿತಗೊಳಿಸಿ ಒಳ ಮೀಸಲಾತಿ**

ಜಾರಿಗೊಳಿಸಲಾಗಿದ್ದು, ದಿನಾಂಕ: 08.05.2026 ರಂದು ಸಮಾಜ ಕಲ್ಯಾಣ ಇಲಾಖೆಯು ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 515 ಪಕವಿ 2026 ರಂತೆ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಬೇಕಾದ ರಿಕ್ತ ಸ್ಥಾನಗಳಿಗೆ ಅನುಸರಿಸಬೇಕಾದ 400 ಬಿಂದುಗಳ ರೋಸ್ಟರನ್ನು ವಿವಿಧ ನೇಮಕಾತಿ / ಆಯ್ಕೆ ಪ್ರಾಧಿಕಾರಗಳು ನೇರ ನೇಮಕಾತಿ ಸಂದರ್ಭದಲ್ಲಿ ಅಗತ್ಯ ಕ್ರಮ ವಹಿಸಲು ಸೂಚಿಸಲಾಗಿರುತ್ತದೆ.

***ವಿಶೇಷ ಸೂಚನೆ:***

*ಈ ಮೇಲ್ಕಂಡ ಖಾಲಿ ಹುದ್ದೆಗಳ ವರ್ಗೀಕರಣದಲ್ಲಿ ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಯಾವುದೇ ಸಂದರ್ಭದಲ್ಲಿ ಆಯ್ಕೆ ಪ್ರಾಧಿಕಾರವು ಬದಲಾವಣೆ ಮಾಡಿಕೊಳ್ಳಬಹುದಾಗಿರುತ್ತದೆ. ಈ ಮಾಹಿತಿಯನ್ನು ಕರ್ನಾಟಕ ಅರಣ್ಯ ಇಲಾಖೆಯ ಅಧಿಕೃತ ಜಾಲತಾಣ:* ***https://aranya.gov.in/*** *ನಲ್ಲಿ ಮುಖಪುಟದ ಕೆಳಭಾಗದಲ್ಲಿ* ***"ನೇಮಕಾತಿ"*** *ಶೀರ್ಷಿಕೆಯ ಮೂಲಕ ಪ್ರಕಟಪಡಿಸಲಾಗುವುದು.*

**3. ಅರ್ಹತೆ:**

(1) ಭಾರತೀಯ ನಾಗರಿಕನಾಗಿರತಕ್ಕದ್ದು.

(2) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಪತ್ನಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೆ ನೇಮಕಾತಿಗೆ ಅರ್ಹರಾಗುವುದಿಲ್ಲ.

(3) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಹಾಗೂ ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

(4) ದೈಹಿಕವಾಗಿ ಅನರ್ಹರಾಗಿದ್ದಾರೆ ಎಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇರೆಗೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಆಯ್ಕೆ ಪ್ರಾಧಿಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

**4. ವಿದ್ಯಾರ್ಹತೆ**

ಅಭ್ಯರ್ಥಿಯು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆಗೆ ತತ್ಸಮಾನವಾದ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಹೊಂದಿರಬೇಕು.

**ವಿಶೇಷ ಸೂಚನೆಗಳು**

**(1)** ಸರ್ಕಾರದ ಸುತ್ತೋಲೆ ಸಂಖ್ಯೆ: **ಸಿ.ಆ.ಸು.ಇ. 81 ಸೇವನೆ 2017**, ದಿನಾಂಕ: **27.02.2018** ರಲ್ಲಿ ಸ್ಪಷ್ಟಪಡಿಸಿರುವ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು ಈ ಕೆಳಗಿನಂತಿವೆ:

(a) ಸಿ.ಬಿ.ಎಸ್.ಇ. (CBSE) ಮತ್ತು ಐ.ಸಿ.ಎಸ್.ಇ. (ICSE) ಮಂಡಳಿಯು ನಡೆಸುವ **Class 10** ಪರೀಕ್ಷೆ; ಅಥವಾ

(b) ಇತರೆ ರಾಜ್ಯ ಸರ್ಕಾರಗಳ ಪರೀಕ್ಷಾ ಮಂಡಳಿಗಳಿಂದ ನಡೆಸುವ **Class 10** ಪರೀಕ್ಷೆ; ಅಥವಾ

(c) ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (NIOS) ವತಿಯಿಂದ ನಡೆಸುವ ಪ್ರೌಢ ಶಿಕ್ಷಣ ಮಟ್ಟದ ಕೋರ್ಸ್; ಅಥವಾ

(d) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಪ್ರೌಢ ಶಿಕ್ಷಣ ಮಟ್ಟದ ಕೋರ್ಸ್ (KOS).

**(2)** ಮೇಲೆ ನಮೂದಿಸಿರುವ ವಿದ್ಯಾರ್ಹತೆಯನ್ನು ಹೊಂದದೇ ಇರುವ ಅಥವಾ ಇತರೆ ಕಾರಣಗಳಿಂದ ಅನರ್ಹರಿರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಅರ್ಜಿ ಸಲ್ಲಿಸಿ, ಯಾವುದೇ ಕಾರಣದಿಂದ ಭಾಗವಹಿಸಿದಲ್ಲಿ, ನಂತರ ನಿಗದಿಪಡಿಸಲಾದ ವಿದ್ಯಾರ್ಹತೆ ಅಂಕಪಟ್ಟಿ ಹೊಂದಿರುವುದಿಲ್ಲವೆಂದು ಅಥವಾ ಇತರೆ ಕಾರಣಗಳಿಂದ ಅನರ್ಹರಿರುವುದು ಆಯ್ಕೆ ಪ್ರಾಧಿಕಾರ / ನೇಮಕಾತಿ ಪ್ರಾಧಿಕಾರಕ್ಕೆ ಕಂಡುಬಂದಲ್ಲಿ, ಅಂತಹ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು ಹಾಗೂ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದೇನೆ ಎಂಬ ಕಾರಣಕ್ಕಾಗಿಯೂ ಅಭ್ಯರ್ಥಿಯು ಯಾವುದೇ ಹಕ್ಕನ್ನು ಹೊಂದಿರುವುದಿಲ್ಲ. ಈ ಕುರಿತು ಆಯ್ಕೆ ಪ್ರಾಧಿಕಾರಿ / ನೇಮಕಾತಿ ಪ್ರಾಧಿಕಾರ ತೆಗೆದುಕೊಳ್ಳುವ ನಿರ್ಣಯವೇ ಅಂತಿಮವಾಗಿರುತ್ತದೆ.

**(3)** ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆಯ ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಹಾಗೂ ನಿಗದಿತ ವಿದ್ಯಾರ್ಹತೆಯ ಅಂಕಪಟ್ಟಿ ಹೊಂದಿಲ್ಲದೇ ಇರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.

**(4)** ಸ್ಥಳೀಯ ಅರಣ್ಯ ಬುಡಕಟ್ಟು ಪರಿಶಿಷ್ಟ ಪಂಗಡ [Local Forest Dwelling Tribes] ಪ್ರವರ್ಗದಡಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಆನ್ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ಅರ್ಜಿ ಸಲ್ಲಿಸುವ ವೇಳೆ **ಪರಿಶಿಷ್ಟ ಜಾತಿ - ಸ್ಥಳೀಯ ಅರಣ್ಯ ಬುಡಕಟ್ಟು ಪರಿಶಿಷ್ಟ ಪಂಗಡ [Local Forest Dwelling Tribes] ಮೀಸಲಾತಿ ಅಂಕಣವನ್ನು ಎಚ್ಚರಿಕೆ ವಹಿಸಿ ಭರ್ತಿ ಮಾಡುವುದು. ತಪ್ಪಿದ್ದಲ್ಲಿ, ಈ ಬಗ್ಗೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.**

**5. ವಯೋಮಿತಿ:**

ಕರ್ನಾಟಕ ನಾಗರಿಕ ಸೇವೆಗಳ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 6ರಲ್ಲಿ ಒಳಗೊಂಡಿರುವ ಯಾವುದೇ ವಿಷಯದ ಹೊರತಾಗಿಯೂ ಅಭ್ಯರ್ಥಿಗಳು ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ **ಕನಿಷ್ಠ 18 ವರ್ಷ** ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಅಧಿಸೂಚನೆ ಪ್ರಾರಂಭಿಕ ದಿನಾಂಕಕ್ಕೆ ಈ ಕೆಳಗಿನಂತೆ **ಗರಿಷ್ಠ ವಯೋಮಿತಿಯೊಳಗಿರತಕ್ಕದ್ದು.**

**ಸರ್ಕಾರದ ಆದೇಶ ಸಂಖ್ಯೆ: ಸಿ.ಆಸು.ಇ. 262 ಸೇನೆನಿ 2025, ದಿನಾಂಕ: 29.01.2026ರನ್ವಯ ಈ ಆದೇಶದ ದಿನಾಂಕದ ನಂತರ ಮುಂದಿನ ದಿನಾಂಕ: 31.12.2027ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ (as a one-time measure) 5 ವರ್ಷಗಳ ಸಡಿಲಿಕೆಯನ್ನು ನೀಡಲಾಗಿರುತ್ತದೆ.**

| | | |
|---|---|---|
| 5.1 | ಸಾಮಾನ್ಯ ಅಭ್ಯರ್ಥಿ | ಗರಿಷ್ಠ ವಯೋಮಿತಿ 30ವರ್ಷ |
| | ಪ್ರವರ್ಗ IIಎ, IIಬಿ, IIIಎ, IIIಬಿ ಹಿಂದುಳಿದ ಪ್ರವರ್ಗಗಳು | ಗರಿಷ್ಠ ವಯೋಮಿತಿ 32 ವರ್ಷ |
| | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-I | ಗರಿಷ್ಠವಯೋಮಿತಿ 33 ವರ್ಷ |
| 5.2 | ಮಾಜಿ ಸೈನಿಕರಿಗೆ ವಯೋಮಿತಿ: | ಸಶಸ್ತ್ರ ಪಡೆಗಳಲ್ಲಿ ಸೇವೆ ಸಲ್ಲಿಸಿ ನಿಯಮಾನುಸಾರ ನಿವೃತ್ತಿ/ಡಿಮೊಬಿಲೈಸೇಷನ್ (Demobilisation) |

| | |
|---|---|
| | ಅಥವಾ ರಿಟ್ರೆಂಚ್‌ಮೆಂಟ್ (Retrenchment) ಹೊಂದಿದ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅವರು ಯಾವ ಪ್ರವರ್ಗಕ್ಕೆ ಸೇರಿರುತ್ತಾರೆಯೊ ಈ ಮೇಲಿನ ಪ್ರವರ್ಗಕ್ಕೆ ನಿಗದಿಪಡಿಸಿದ ಗರಿಷ್ಠ ವಯೋಮಿತಿಗೆ ಅವರು ಎಷ್ಟು ವರ್ಷ ಸಶಸ್ತ್ರ ಪಡೆಗಳಲ್ಲಿ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳಿಗೆ ಮೂರು (3) ವರ್ಷ ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು. |

5.3 **ಅರಣ್ಯ ಪ್ರೇರಕರಿಗೆ ವಯೋಮಿತಿ:**

ಅಧಿಸೂಚನೆ ದಿನಾಂಕಕ್ಕೆ ಅರಣ್ಯ ಇಲಾಖೆಯಲ್ಲಿ ನಿರಂತರ ಕನಿಷ್ಠ 5 ವರ್ಷಗಳ ಸೇವೆಯನ್ನು ಅರಣ್ಯ ಪ್ರೇರಕರಾಗಿ ಪೂರೈಸಿದ್ದು, ಪ್ರಸ್ತುತ ಅರಣ್ಯ ಪ್ರೇರಕರಾಗಿ ಸೇವೆಯಲ್ಲಿ ಇದ್ದು ನಿಶ್ಚಿತ ಗೌರವಧನವನ್ನು ಪಡೆಯುತ್ತಿರುವ ಅರಣ್ಯ ಪ್ರೇರಕರಿಗೆ ಮಾತ್ರ ಈ ಕೆಳಗಿನ ಗರಿಷ್ಠ ವಯೋಮಿತಿ ಅನ್ವಯವಾಗುವುದು.

| | |
|---|---|
| ಸಾಮಾನ್ಯ ಅಭ್ಯರ್ಥಿ | ಗರಿಷ್ಠ ವಯೋಮಿತಿ 40 ವರ್ಷ |
| ಪ್ರವರ್ಗ IIಎ, IIಬಿ, IIIಎ, IIIಬಿ ಹಿಂದುಳಿದ ಪ್ರವರ್ಗಗಳು | ಗರಿಷ್ಠ ವಯೋಮಿತಿ 42 ವರ್ಷ |
| ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಮತ್ತು ಪ್ರವರ್ಗ-I | ಗರಿಷ್ಠ ವಯೋಮಿತಿ 43 ವರ್ಷ |

## 6. ಅರ್ಜಿಗಳ ಪರಾಮರ್ಶೆ:

ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಾವಳಿಗಳು 2021 ರನ್ವಯ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: FEE 203 FEG 2015 ದಿನಾಂಕ: 06.08.2019 ರ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2019 ರನ್ವಯ ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಪ್ರವರ್ಗವಾರು ಮೀಸಲಾತಿ ನಿಯಮಗಳಂತೆ ಮೀಸಲಾತಿ ವರ್ಗೀಕರಣ ನಿಗದಿಪಡಿಸಲಾಗಿದೆ. ಅಭ್ಯರ್ಥಿಯು ಆನ್ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ನಮೂದಿಸಿರುವ ಮಾಹಿತಿ ಮತ್ತು ವಿವರಗಳು ಹಾಗೂ ಅರ್ಜಿಯೊಂದಿಗೆ ಅಪ್ಲೋಡ್ ಮಾಡಿರುವ ಎಲ್ಲಾ ಪ್ರಮಾಣಪತ್ರ / ದಾಖಲಾತಿಗಳ ಆಧಾರದ ಮೇಲೆ ಅರ್ಜಿಯನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದು. ಕ್ರಮಬದ್ಧವಲ್ಲದ / ಅಪೂರ್ಣ / ಅಸ್ಪಷ್ಟ ಮಾಹಿತಿಗಳಿಂದ ಕೂಡಿದ ಅರ್ಜಿಗಳನ್ನು ಪ್ರಾಥಮಿಕ ಹಂತದಲ್ಲಿಯೇ ತಿರಸ್ಕರಿಸಲಾಗುವುದು. ಅಲ್ಲದೆ, ಅಪ್ಲೋಡ್ ಮಾಡಬೇಕಾಗಿರುವ ದಾಖಲಾತಿಗಳ ಬದಲಾಗಿ ಬೇರೆ ಯಾವುದಾದರೂ ದಾಖಲಾತಿಗಳನ್ನು ಅಪ್ಲೋಡ್ ಮಾಡಿದ್ದಲ್ಲಿ / ಅಪ್ಲೋಡ್ ಮಾಡಬೇಕಾಗಿರುವ ದಾಖಲಾತಿಗಳ ಪೈಕಿ ಯಾವುದಾದರೂ ದಾಖಲಾತಿಗಳನ್ನು ಅಪ್ಲೋಡ್ ಮಾಡದೇ ಇದ್ದಲ್ಲಿ, ಅಂತಹ ಅಭ್ಯರ್ಥಿಯ ಅರ್ಜಿಯನ್ನು ಅಪೂರ್ಣ ಎಂದು ಪರಿಗಣಿಸಿ ತಿರಸ್ಕರಿಸಲಾಗುವುದು. ಇದಕ್ಕೆ ಅಭ್ಯರ್ಥಿಯೇ ಜವಾಬ್ದಾರರಾಗಿರುತ್ತಾರೆ.

## 7. ನೇಮಕಾತಿ / ಆಯ್ಕೆ ವಿಧಾನ:

ಆನ್ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ನಲ್ಲಿ ಸ್ವೀಕೃತವಾದ ಅರ್ಜಿಗಳಲ್ಲಿ ಅಭ್ಯರ್ಥಿಗಳು ಭರ್ತಿ ಮಾಡಿರುವ ಮಾಹಿತಿ / ವಿವರಗಳ ಆಧಾರದನ್ವಯ ಆಯ್ಕೆ ಪ್ರಾಧಿಕಾರವು ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. **ಅಥವಾ** ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆಯ ತತ್ಸಮಾನ **ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ 1:20 (ಹುದ್ದೆ : ಅಭ್ಯರ್ಥಿ)** ಅನುಪಾತದಲ್ಲಿ ಶಾರೀರಿಕ ಮಾನದಂಡಗಳ ಪರೀಕ್ಷೆ [Physical Standard Test], ದೈಹಿಕ ತಾಳ್ವಿಕೆ ಪರೀಕ್ಷೆ [Physical Endurance Test] ಮತ್ತು ದೈಹಿಕ ಕಾರ್ಯ ಸಮರ್ಥತೆ [Physical Efficiency Test] ಪರೀಕ್ಷೆಗಾಗಿ ಅಭ್ಯರ್ಥಿಗಳ ವೃತ್ತ ಮಟ್ಟದ ಅರ್ಹತಾ ಪಟ್ಟಿಯನ್ನು ಸಿದ್ಧಪಡಿಸಿ, ಪರೀಕ್ಷೆಗಳ ಕುರಿತ ದಿನಾಂಕವನ್ನು ಕಾಲಕಾಲಕ್ಕೆ ಕರ್ನಾಟಕ ಅರಣ್ಯ ಇಲಾಖೆಯ ಅಧಿಕೃತ ಜಾಲತಾಣ: **https://aranya.gov.in/** ನಲ್ಲಿ ಮುಖಪುಟದ ಕೆಳಭಾಗದಲ್ಲಿ **"ನೇಮಕಾತಿ"** ಶೀರ್ಷಿಕೆಯ ಮೂಲಕ ಪ್ರಕಟಪಡಿಸಲಾಗುವುದು. **ಈ ಕುರಿತು**

ಇಲಾಖೆಯ ವತಿಯಿಂದ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲಾಗುವುದಿಲ್ಲ.

**8. ಶಾರೀರಿಕ ಮಾನದಂಡಗಳ ಪರೀಕ್ಷೆ [Physical Standard Test]:**

**8.1 ಶಾರೀರಿಕ ಮಾನದಂಡಗಳು [Physical Standard]**

| **ಪುರುಷ ಅಭ್ಯರ್ಥಿಗಳು:** | | |
|---|---|---|
| **ದೇಹದಾರ್ಢ್ಯತೆ** | **ಇತರೆ ಪ್ರವರ್ಗಗಳ ಎಲ್ಲಾ ಅಭ್ಯರ್ಥಿಗಳು** | **ಅರಣ್ಯ ಬುಡಕಟ್ಟು ಪರಿಶಿಷ್ಟ ಪಂಗಡ (Forest Dwelling Scheduled Tribes) ಅಭ್ಯರ್ಥಿಗಳು** |
| ಎತ್ತರ: | ಕನಿಷ್ಠ 163 ಸೆ.ಮೀ. | ಕನಿಷ್ಠ 152 ಸೆ.ಮೀ. |
| ಎದೆ ಸುತ್ತಳತೆ: | ಸಾಮಾನ್ಯ ಸ್ಥಿತಿಯಲ್ಲಿ ಕನಿಷ್ಠ 79 ಸೆ.ಮೀ. | ಸಾಮಾನ್ಯ ಸ್ಥಿತಿಯಲ್ಲಿ ಕನಿಷ್ಠ 74 ಸೆ.ಮೀ. |
| ಎದೆ ಕನಿಷ್ಠ ಹಿಗ್ಗುವಿಕೆ: | 5 ಸೆ.ಮೀ. | 5 ಸೆ.ಮೀ. |

| **ಮಹಿಳಾ ಅಭ್ಯರ್ಥಿಗಳು:** | | |
|---|---|---|
| **ದೇಹ ದಾರ್ಢ್ಯತೆ** | **ಇತರೆ ಪ್ರವರ್ಗಗಳ ಎಲ್ಲಾ ಅಭ್ಯರ್ಥಿಗಳು** | **ಅರಣ್ಯ ಬುಡಕಟ್ಟು ಪರಿಶಿಷ್ಟ ಪಂಗಡ (Forest Dwelling Scheduled Tribes) ಅಭ್ಯರ್ಥಿಗಳು** |
| ಎತ್ತರ: | ಕನಿಷ್ಠ 150 ಸೆ.ಮೀ. | ಕನಿಷ್ಠ 145 ಸೆ.ಮೀ. |
| ಕನಿಷ್ಠ ತೂಕ: | 40 ಕೆ.ಜಿ. | 38 ಕೆ.ಜಿ. |

**ಟಿಪ್ಪಣಿ:**

ಪುರುಷ ಅಭ್ಯರ್ಥಿಗಳಿಗೆ ಅನ್ವಯವಾಗುವ ಮೇಲ್ಕಂಡ ಎಲ್ಲಾ ಶಾರೀರಿಕ ಮಾನದಂಡಗಳು ಪುರುಷ ತೃತೀಯಲಿಂಗ ಅಭ್ಯರ್ಥಿಗಳಿಗೆ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ಅನ್ವಯವಾಗುವ ಮೇಲ್ಕಂಡ ಎಲ್ಲಾ ಶಾರೀರಿಕ ಮಾನದಂಡಗಳು ಮಹಿಳಾ ತೃತೀಯಲಿಂಗ ಅಭ್ಯರ್ಥಿಗಳಿಗೆ ಅನುಸರಿಸತಕ್ಕದ್ದು.

**8.2 ಈ ಕೆಳಕಂಡ ದೈಹಿಕ ನ್ಯೂನ್ಯತೆ [Physical Defects] ಗಳನ್ನು ಹೊಂದಿರುವ ಅಭ್ಯರ್ಥಿಗಳು ಆಯ್ಕೆಗೆ ಅನರ್ಹರಾಗಿರುತ್ತಾರೆ:**

(1) ತಾಗು ಮಂಡಿಗಳು (Knock-knees);

(2) ಬಾಗಿದ ಕಾಲುಗಳು (Bow legs);

(3) ಚಪ್ಪಟೆ ಪಾದ (Flat feet);

(4) ನರ ಊತ ಇರುವವರು (Varicose veins);

(5) ಮಾತನಾಡಲು ಮತ್ತು ಕೇಳುವ ಸಾಮರ್ಥ್ಯದಲ್ಲಿ ತೊಡಕು (Impediment in Speech and Hearing);

(6) ಪುರುಷ ಅಭ್ಯರ್ಥಿಗಳಿಗೆ ಅಂಡವಾಯು (Hydrocele in Men);

(7) ದೃಷ್ಟಿ / ವರ್ಣಾಂಧತ್ವ / ಇರುಳು ಕುರುಡು (Vision / Colour Blindness / Night Blindness)

**8.3 ದೃಷ್ಟಿ ಸಾಮರ್ಥ್ಯ [Eye Vision]:**

ಅಭ್ಯರ್ಥಿಗಳು ಈ ಕೆಳಗೆ ನಿಗದಿಪಡಿಸಿರುವ ದೃಷ್ಟಿ ಸಾಮರ್ಥ್ಯವನ್ನು ಕನ್ನಡಕ ಸಹಿತ ಅಥವಾ ಕನ್ನಡಕ ರಹಿತ ಕಡ್ಡಾಯವಾಗಿ ಹೊಂದಿರಬೇಕು ಹಾಗೂ ದೃಷ್ಟಿ ಸಾಮರ್ಥ್ಯದ ಕುರಿತು ಈ ಕೆಳಕಂಡ ಪರೀಕ್ಷೆಗಳನ್ನು ನಡೆಸಲಾಗುವುದು.

| ದೂರ ದೃಷ್ಟಿ(Distant vision) | | | ಸಮೀಪ ದೃಷ್ಟಿ(Near vision) | | |
|---|---|---|---|---|---|
| **ದೋಷ ರಹಿತ ಕಣ್ಣು (Better eye)** | **ಅಥವಾ** | **ದೋಷ ಪೂರಿತ ಕಣ್ಣು (Worse eye)** | **ದೋಷ ರಹಿತ ಕಣ್ಣು (Better eye)** | **ಅಥವಾ** | **ದೋಷ ಪೂರಿತ ಕಣ್ಣು (Worse eye)** |
| 6/6 ಮೀಟರ್ | ಅಥವಾ | 6/9 ಮೀಟರ್ | 0/6 ಮೀಟರ್ | ಅಥವಾ | 0/8 ಮೀಟರ್ |

ಕಣ್ಣಿನ ಬಣ್ಣ ದೃಷ್ಟಿ ಪರೀಕ್ಷೆಯು ಅತ್ಯಗತ್ಯವಾಗಿರುತ್ತದೆ.

ಕೆಳಗಿನ ಕೋಷ್ಟಕದಲ್ಲಿ ವಿವರಿಸಿದಂತೆ ಲ್ಯಾನ್ಟರ್ನ್‌ನಲ್ಲಿನ ದ್ಯುತಿ ರಂಧ್ರದ ಗಾತ್ರವನ್ನು ಅವಲಂಬಿಸಿ ಬಣ್ಣದ ಗ್ರಹಿಕೆಯನ್ನು ಉನ್ನತ ಮತ್ತು ಕಡಿಮೆ ದರ್ಜೆಗೆ ವರ್ಗೀಕರಿಸಬೇಕು.

| ವಿವರಗಳು | ಉನ್ನತದರ್ಜೆಯಬಣ್ಣಗ್ರಹಿಕೆ | ಕಡಿಮೆದರ್ಜೆಯಬಣ್ಣಗ್ರಹಿಕೆ |
|---|---|---|
| ದೀಪ ಮತ್ತು ಅಭ್ಯರ್ಥಿಯ ನಡುವಿನ ಅಂತರ | 16 ಅಡಿ | 16 ಅಡಿ |
| ದ್ಯುತಿ ರಂಧ್ರದ ಗಾತ್ರ | 1.3 ಮಿ.ಮೀ | 1.3 ಮಿ.ಮೀ |
| ಮಾನ್ಯತೆ ಸಮಯ | 5 ಸೆಕೆಂಡುಗಳು | 5 ಸೆಕೆಂಡುಗಳು |

ಕಡಿಮೆ ದರ್ಜೆಯ ಬಣ್ಣದ ದೃಷ್ಟಿಯನ್ನು ಪರ್ಯಾಪ್ತವೆಂದು (Sufficient) ಪರಿಗಣಿಸಲಾಗುತ್ತದೆ.

ಪ್ರತಿ ಕಣ್ಣು ಸಂಪೂರ್ಣ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳೆಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆ ಎಂದು ಪರಿಗಣಿಸಲಾಗುವುದು.

**8.4 ಶ್ರವಣ ಪರೀಕ್ಷೆ [Hearing Test]:**

ಅಭ್ಯರ್ಥಿಗಳ ಶ್ರವಣ ಪರೀಕ್ಷೆಯನ್ನು ಪರೀಕ್ಷಿಸಲು ಈ ಕೆಳಕಂಡ ಪರೀಕ್ಷೆಗಳನ್ನು ನಡೆಸಲಾಗುವುದು.

1. ರಿನ್ನರ್ ಪರೀಕ್ಷೆ (Rinner's Test);
2. ವೆಬ್ಬರ್ ಪರೀಕ್ಷೆ (Webber's Test);
3. ತಲೆ ತಿರುಗುವಿಕೆಗಾಗಿ ಪರೀಕ್ಷೆ (Tests for Vertigo).

ಮೇಲಿನ ಪರೀಕ್ಷೆಗಳಲ್ಲಿ ಯಾವುದಾದರೂ ಶ್ರವಣ ದೋಷವಿದೆಯೆಂದು ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಗೆ ಅನರ್ಹರಾಗುತ್ತಾರೆ.

**ವಿಶೇಷ ಸೂಚನೆ:**

(i) ಅರ್ಹ ಅಭ್ಯರ್ಥಿಗಳಿಗೆ ವೈದ್ಯಕೀಯ ಪರೀಕ್ಷೆಗಳನ್ನು ಆಯ್ಕೆ ಪ್ರಾಧಿಕಾರದ ಮೇಲ್ವಿಚಾರಣೆಯಲ್ಲಿ ನಡೆಸಲಾಗುವುದು.

(ii) ಅಭ್ಯರ್ಥಿಯನ್ನು ವೈದ್ಯಕೀಯ ಪರೀಕ್ಷೆಯಲ್ಲಿ ವೈದ್ಯಕೀಯವಾಗಿ ಅನರ್ಹಗೊಳಿಸಿದರೆ, ಅಭ್ಯರ್ಥಿಯು ವೈದ್ಯಕೀಯ ಪರೀಕ್ಷೆಯ ಕುರಿತು ಅನರ್ಹಗೊಳಿಸಿದ ದಿನಾಂಕದಿಂದ ಗರಿಷ್ಠ 07 ದಿವಸದೊಳಗೆ ಆಯ್ಕೆ ಪ್ರಾಧಿಕಾರದ ಮುಂದೆ ಮೇಲ್ಮನವಿ ಸಲ್ಲಿಸಬಹುದಾಗಿರುತ್ತದೆ. ಆಯ್ಕೆ ಪ್ರಾಧಿಕಾರವು ಅಭ್ಯರ್ಥಿಯ ಮೇಲ್ಮನವಿಯ ಕುರಿತು ವೈದ್ಯಕೀಯ ಮಂಡಳಿಯ ಮುಂದೆ ಆ ಅಭ್ಯರ್ಥಿಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಗುವುದು. ಈ ಮೇಲ್ಮನವಿಯ ಕುರಿತು ವೈದ್ಯಕೀಯ ಮಂಡಳಿಯು ನೀಡುವ ವೈದ್ಯಕೀಯ ವರದಿಯೇ ಅಂತಿಮವಾಗಿರುತ್ತದೆ.

**9. ದೈಹಿಕ ತಾಳ್ವಿಕೆ ಪರೀಕ್ಷೆ [Physical Endurance Test]:**

| | | |
|---|---|---|
| ಪುರುಷ ಅಭ್ಯರ್ಥಿಗಳು : | 1600 ಮೀಟರ್ ಓಟ | 07 ನಿಮಿಷಗಳ ಅವಧಿಯಲ್ಲಿ ಪೂರ್ಣಗೊಳಿಸಬೇಕು. |
| ಮಹಿಳಾ ಅಭ್ಯರ್ಥಿಗಳು ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳು : | 1000 ಮೀಟರ್ ಓಟ | 06 ನಿಮಿಷಗಳ ಅವಧಿಯಲ್ಲಿ ಪೂರ್ಣಗೊಳಿಸಬೇಕು. |

**ವಿಶೇಷ ಸೂಚನೆ:**

ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು. ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳನ್ನು ಮಾತ್ರ ಮುಂದಿನ ಹಂತದ ದೈಹಿಕ ಸಮರ್ಥತೆ ಪರೀಕ್ಷೆಗೆ ಪರಿಗಣಿಸಲಾಗುವುದು.

**10. ದೈಹಿಕ ಸಮರ್ಥತೆ ಪರೀಕ್ಷೆ [Physical Efficiency Test]:**

| ಕ್ರ. ಸಂ. | ಕ್ರೀಡಾ ಚಟುವಟಿಕೆ | ಅರ್ಹತಾ ಸಮಯ / ದೂರ [Qualifying time/ distance] | |
|---|---|---|---|
| | | ಪುರುಷ ಅಭ್ಯರ್ಥಿಗಳು | ಮಹಿಳಾ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳು |
| 1 | 100 ಮೀಟರ್ ಓಟ | 15 ಸೆಕೆಂಡುಗಳು | 18.5 ಸೆಕೆಂಡುಗಳು |
| 2 | ಎತ್ತರಜಿಗಿತ (High Jump) | 1.20 ಮೀಟರ್ | 0.90 ಮೀಟರ್ |
| 3 | ಉದ್ದಜಿಗಿತ (Long Jump) | 3.80 ಮೀಟರ್ | 2.50 ಮೀಟರ್ |
| 4 | ಶಾಟ್‌ಪುಟ್ (Shotput)<br>ಪುರುಷ: 16 ಎಲ್.ಬಿ.<br>ಮಹಿಳೆ: 8 ಎಲ್.ಬಿ. | 5.60 ಮೀಟರ್ | 3.76 ಮೀಟರ್ |
| 5(ಎ) | 800 ಮೀಟರ್ ಓಟ | 2 ನಿಮಿಷ 50 ಸೆಕೆಂಡುಗಳು | - |
| 5(ಬಿ) | 200 ಮೀಟರ್ ಓಟ | - | 40 ಸೆಕೆಂಡುಗಳು |

***ಸೂಚನೆ:*** ಅಭ್ಯರ್ಥಿಗಳು ಮುಂದಿನ ಆಯ್ಕೆ ಪ್ರಕ್ರಿಯೆಗೆ ಅರ್ಹತೆ ಹೊಂದಲು ಈ ಮೇಲಿನ ಐದು (5) ವಿವಿಧ ದೈಹಿಕ ಸಮರ್ಥತೆ ಪರೀಕ್ಷೆಗಳ ಪೈಕಿ ಕನಿಷ್ಠ ಮೂರು (3) ಪರೀಕ್ಷೆಗಳಲ್ಲಿ ಕಡ್ಡಾಯವಾಗಿ ತೇರ್ಗಡೆ ಹೊಂದತಕ್ಕದ್ದು. ದೈಹಿಕ ಸಮರ್ಥತೆ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳನ್ನು ಮಾತ್ರ ಮುಂದಿನ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಲಾಗುವುದು.

**ಟಿಪ್ಪಣಿ:**

(1) ಪುರುಷ ಅಭ್ಯರ್ಥಿಗಳಿಗೆ ಅನ್ವಯವಾಗುವ ಮೇಲ್ಕಂಡ ಎಲ್ಲಾ ದೈಹಿಕ ತಾಳ್ವಿಕೆ ಹಾಗೂ ದೈಹಿಕ ಸಮರ್ಥತೆ ಪರೀಕ್ಷೆಗಳನ್ನು ಪುರುಷ ತೃತೀಯಲಿಂಗ ಅಭ್ಯರ್ಥಿಗಳಿಗೆ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ಅನ್ವಯವಾಗುವ ಮೇಲ್ಕಂಡ ಎಲ್ಲಾ ದೈಹಿಕ ತಾಳ್ವಿಕೆ ಹಾಗೂ ದೈಹಿಕ ಸಮರ್ಥತೆ ಪರೀಕ್ಷೆಗಳನ್ನು ಮಹಿಳಾ ತೃತೀಯಲಿಂಗ ಅಭ್ಯರ್ಥಿಗಳಿಗೆ ಅನುಸರಿಸತಕ್ಕದ್ದು.

(2) ಅಭ್ಯರ್ಥಿಗಳು ಶಾರೀರಿಕ ಮಾನದಂಡಗಳ ಪರೀಕ್ಷೆ [Physical Standard Test], ದೈಹಿಕ ತಾಳ್ವಿಕೆ ಪರೀಕ್ಷೆ [Physical Endurance Test] ಮತ್ತು ದೈಹಿಕ ಕಾರ್ಯ ಸಮರ್ಥತೆ [Physical Efficiency Test] ಪರೀಕ್ಷೆಗಳಿಗೆ ಹಾಜರಾಗುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರು ಒಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು ಮತ್ತು ಅದರ ಒಂದು ಸ್ವಯಂ ದೃಢೀಕೃತ ಪ್ರತಿಯನ್ನು ಆಯ್ಕೆ ಪ್ರಾಧಿಕಾರ / ನೇಮಕಾತಿ ಪ್ರಾಧಿಕಾರಕ್ಕೆ ನೀಡುವುದು.

(i) ಆಧಾರ್ ಕಾರ್ಡ್ (Aadhar Card)

(ii) ಪಾಸ್‌ಪೋರ್ಟ್ (Passport)

(iii) ಚಾಲನಾ ಪರವಾನಗಿ ಪತ್ರ (Driving License)

(iv) ಪ್ಯಾನ್ ಕಾರ್ಡ್ (PAN Card)

(v) ರಾಜ್ಯ ಸರ್ಕಾರ / ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೆ ಒಳಪಟ್ಟ ಖಾಸಗಿ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

(vi) ಸಾರ್ವಜನಿಕ ಬ್ಯಾಂಕ್‌ಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರ ಪಾಸ್‌ಪುಸ್ತಕ (Bank Pass Book with Photograph)

(vii) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲಾತಿ ಪತ್ರ ಅಥವಾ ಪಟ್ಟಾ ಪುಸ್ತಕ (Pattas and Registered Deeds with Photograph)

(viii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣಪತ್ರ (Community Certificate with Photograph)

(ix) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's Pension Book / Pension Payment Order)

(x) ಎನ್.ಆರ್.ಇ.ಜಿ.ಎಸ್. ಇಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ (NREGS – Job Card with Photograph)

(xi) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC)

(3) ಕರೆಪತ್ರದ (Hall Ticket) ಜೊತೆಗೆ ಆನ್ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು. ತಪ್ಪಿದಲ್ಲಿ ಮೇಲಿನ ಪರೀಕ್ಷೆಗಳಿಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ರದ್ದು / ಅನರ್ಹಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

**ವಿಶೇಷ ಸೂಚನೆ:**

(i) ದೈಹಿಕ ತಾಳ್ವಿಕೆ ಹಾಗೂ ದೈಹಿಕ ಸಮರ್ಥತೆ ಪರೀಕ್ಷೆಗಳಿಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಈ ಪರೀಕ್ಷೆಗಳ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ / ಅವಘಡ / ತೊಂದರೆಗಳಿಗೆ ಅರಣ್ಯ ಇಲಾಖೆ / ಆಯ್ಕೆ ಪ್ರಾಧಿಕಾರ / ನೇಮಕಾತಿ ಪ್ರಾಧಿಕಾರ ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಟಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು

ಅಭ್ಯರ್ಥಿಯ ಆರೋಗ್ಯವು ಎಲ್ಲಾ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತಪಡಿಸಿಕೊಂಡು, ಇಲಾಖೆ ನಡೆಸುವ ದೈಹಿಕ ತಾಳ್ವಿಕೆ ಹಾಗೂ ದೈಹಿಕ ಸಮರ್ಥತೆ ಪರೀಕ್ಷೆಗೆ ಎಲ್ಲಾ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಮುಂಚೆಯಿಂದಲೇ ದೈಹಿಕ ತಾಳ್ವಿಕೆ ಹಾಗೂ ದೈಹಿಕ ಸಮರ್ಥತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ / ತಾಲೀಮು ಮಾಡಿಕೊಳ್ಳತಕ್ಕದ್ದು. ಈ ಪರೀಕ್ಷೆಗಳಿಗೆ ಅಭ್ಯರ್ಥಿಗಳು ತಮ್ಮ ಸ್ವಂತ ಜವಾಬ್ದಾರಿ ಹಾಗೂ ಸ್ವ ಇಚ್ಛೆಯಿಂದ ಭಾಗವಹಿಸುವುದು.

(ii) ಅಭ್ಯರ್ಥಿಗಳು ಮುಂದಿನ ಆಯ್ಕೆ ಪ್ರಕ್ರಿಯೆಗೆ ಅರ್ಹತೆ ಹೊಂದಲು ಈ ಮೇಲಿನ ಐದು (5) ವಿವಿಧ ದೈಹಿಕ ಸಮರ್ಥತೆ ಪರೀಕ್ಷೆಗಳ ಪೈಕಿ ಕನಿಷ್ಠ ಮೂರು (3) ಪರೀಕ್ಷೆಗಳಲ್ಲಿ ಕಡ್ಡಾಯವಾಗಿ ತೇರ್ಗಡೆ ಹೊಂದತಕ್ಕದ್ದು. ದೈಹಿಕ ಸಮರ್ಥತೆ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳನ್ನು ಮಾತ್ರ ಮುಂದಿನ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಲಾಗುವುದು. ದೈಹಿಕ ಸಮರ್ಥತೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

(iii) ಯಾವುದೇ ಹಂತದಲ್ಲಿ ದೈಹಿಕ ತಾಳ್ವಿಕೆ / ದೈಹಿಕ ಸಮರ್ಥತೆ ಪರೀಕ್ಷೆಯಲ್ಲಿ ಅನರ್ಹರಾದಲ್ಲಿ ಅಥವಾ ಪರೀಕ್ಷೆ ನಡೆಯುವ ಸಮಯದಲ್ಲಿ ಗಾಯಗೊಂಡಲ್ಲಿ ಅಥವಾ ಯಾವುದೇ ಕಾರಣದಿಂದಾಗಿ ಪರೀಕ್ಷೆಯನ್ನು ಅಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಇನ್ನೊಂದು ಅವಕಾಶವನ್ನು ನೀಡಲಾಗುವುದಿಲ್ಲ.

(iv) ಮಹಿಳಾ ಅಭ್ಯರ್ಥಿಗಳು 12 ವಾರಗಳ ಮೇಲ್ಪಟ್ಟ ಗರ್ಭಿಣಿ ಅಥವಾ 6 ವಾರಗಳ ಕಡಿಮೆ ಬಾಣಂತಿ ಸ್ತ್ರೀಯರಾಗಿದ್ದಲ್ಲಿ ಅಂತಹ ಅಭ್ಯರ್ಥಿಗಳು ಆರೋಗ್ಯದ ಹಿತದೃಷ್ಟಿಯಿಂದ ದೈಹಿಕ ತಾಳ್ವಿಕೆ ಮತ್ತು ದೈಹಿಕ ಸಮರ್ಥತೆ ಪರೀಕ್ಷೆಗಳಲ್ಲಿ ಪಾಲ್ಗೊಳ್ಳಲು ತಾತ್ಕಾಲಿಕವಾಗಿ ಅವಕಾಶವಿರುವುದಿಲ್ಲ. ಅಂತಹ ಅಭ್ಯರ್ಥಿಗಳು ಈ ಪರೀಕ್ಷೆಗಳ ಸಮಯದಲ್ಲಿ ಅಥವಾ ಮುಂಚಿತವಾಗಿ ಆಯ್ಕೆ ಪ್ರಾಧಿಕಾರಕ್ಕೆ ಈ ಕುರಿತು ವೈದ್ಯಕೀಯ ಪ್ರಮಾಣಪತ್ರವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು. ವೈದ್ಯಕೀಯ ಪ್ರಮಾಣಪತ್ರವನ್ನು ಸಲ್ಲಿಸದೇ ಇರುವ ಅಭ್ಯರ್ಥಿಗಳನ್ನು ನೇಮಕಾತಿ ಪ್ರಕ್ರಿಯೆಯಿಂದ ಕೈಬಿಡಲಾಗುವುದು. ಆಯ್ಕೆ ಪ್ರಾಧಿಕಾರ / ನೇಮಕಾತಿ ಪ್ರಾಧಿಕಾರದ ಗಮನಕ್ಕೆ ತರದೆ ಅಂತಹ ಅಭ್ಯರ್ಥಿಗಳು ದೈಹಿಕ ತಾಳ್ವಿಕೆ ಮತ್ತು ದೈಹಿಕ ಸಮರ್ಥತೆ ಪರೀಕ್ಷೆಗಳಲ್ಲಿ ಪಾಲ್ಗೊಂಡಲ್ಲಿ, ಸಂಭವಿಸಬಹುದಾದ ಯಾವುದೇ ಅವಘಡಗಳಿಗೆ ಅಂತಹ ಅಭ್ಯರ್ಥಿಗಳೇ ಪೂರ್ಣ ಜವಾಬ್ದಾರರಾಗಿರುತ್ತಾರೆ.

(v) ಈ ಮೇಲಿನಂತೆ ವೈದ್ಯಕೀಯ ಪ್ರಮಾಣ ಪತ್ರವನ್ನು ಸಲ್ಲಿಸಿ / ಹಾಜರುಪಡಿಸಿ, ದೈಹಿಕ ತಾಳ್ವಿಕೆ / ದೈಹಿಕ ಸಮರ್ಥತೆ ಪರೀಕ್ಷೆಗಳಿಗೆ ಆಯ್ಕೆ ಪ್ರಾಧಿಕಾರದಿಂದ ಲಿಖಿತ ವಿನಾಯಿತಿ ಪಡೆದ ಮಹಿಳಾ ಅಭ್ಯರ್ಥಿಗಳು ವೈದ್ಯಕೀಯ ಸಕ್ಷಮ ಪ್ರಾಧಿಕಾರವಾದ ಜಿಲ್ಲಾ ಶಸ್ತ್ರಚಿಕಿತ್ಸಕರು / ಜಿಲ್ಲಾ ಸರ್ಕಾರಿ ವೈದ್ಯರಿಂದ ಈ ವಿಶೇಷ ಕಾರಣದಿಂದ ವಿನಾಯಿತಿ ಪಡೆದು, ದೈಹಿಕವಾಗಿ ಅರ್ಹರಿರುವುದಾಗಿ ವೈದ್ಯಕೀಯ ಪ್ರಮಾಣಪತ್ರವನ್ನು ಪಡೆದು, ಆಯ್ಕೆ ಪ್ರಾಧಿಕಾರಕ್ಕೆ ಸಲ್ಲಿಸಿದ್ದಲ್ಲಿ ದೈಹಿಕ ತಾಳ್ವಿಕೆ ಮತ್ತು ದೈಹಿಕ ಸಮರ್ಥತೆ ಪರೀಕ್ಷೆಗಳಿಗೆ ಭಾಗವಹಿಸಲು ಒಂದು ಸಾರಿ ಮಾತ್ರ ಅವಕಾಶ ನೀಡಲಾಗುವುದು. ಇಂತಹ ಪ್ರಕರಣಗಳಲ್ಲಿ ಮಹಿಳಾ ಅಭ್ಯರ್ಥಿಗಳು ಆಯ್ಕೆ ಪ್ರಾಧಿಕಾರವು ಪುನರ್ ನಿಗದಿಪಡಿಸಿದ ದಿನಾಂಕದಂದು ದೈಹಿಕ ಪರೀಕ್ಷೆಗಳಿಗೆ ಕಡ್ಡಾಯವಾಗಿ ಹಾಜರಾಗಿ, ಭಾಗವಹಿಸುವುದು. ತಪ್ಪಿದಲ್ಲಿ, ಈ ಪರೀಕ್ಷೆಗಳಿಗೆ ಯಾವುದೇ ಕಾರಣಕ್ಕೂ ಮತ್ತೊಮ್ಮೆ ಅವಕಾಶವನ್ನು ನೀಡಲಾಗುವುದಿಲ್ಲ ಹಾಗೂ ಇಂತಹ ಅಭ್ಯರ್ಥಿಗಳನ್ನು ನೇಮಕಾತಿ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

(vi) ಅಧಿಸೂಚನೆಯಲ್ಲಿ ಅಧಿಸೂಚಿಸಿದ ವೃತ್ತ / ವಿಭಾಗಗಳಲ್ಲಿ ಆಯ್ಕೆ ಪ್ರಾಧಿಕಾರವು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ. ಇದನ್ನು ಕರ್ನಾಟಕ ಅರಣ್ಯ ಇಲಾಖೆಯ ಅಧಿಕೃತ ಜಾಲತಾಣ: https://aranya.gov.in/ ನಲ್ಲಿ ಮುಖಪುಟದ ಕೆಳಭಾಗದಲ್ಲಿ "ನೇಮಕಾತಿ" ಶೀರ್ಷಿಕೆಯ ಮೂಲಕ ಪ್ರಕಟಪಡಿಸಲಾಗುವುದು. ಇಲಾಖೆಯು ನಡೆಸುವ ದೈಹಿಕ ಪರೀಕ್ಷೆಗಳ ಫಲಿತಾಂಶವನ್ನು ಆಯ್ಕೆ ಪ್ರಾಧಿಕಾರವು ದೈಹಿಕ ಪರೀಕ್ಷೆಗಳು ಪೂರ್ಣಗೊಂಡ ನಂತರ ಆಯಾ ಪರೀಕ್ಷಾ ಕೇಂದ್ರಗಳಲ್ಲಿ ಅದೇ ದಿನ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಪಡಿಸಲಾಗುವುದು.

(vii) ದೈಹಿಕ ತಾಳ್ವಿಕೆ / ದೈಹಿಕ ಸಮರ್ಥತೆ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ಸಮಿತಿ / ಆಯ್ಕೆ ಪ್ರಾಧಿಕಾರದ ಸಮಕ್ಷಮದಲ್ಲಿ ನಿಗದಿತ ನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕುವುದು. ಇಲ್ಲವಾದಲ್ಲಿ, ಅಂತಹ ಅಭ್ಯರ್ಥಿಯನ್ನು ಅನರ್ಹರೆಂದು ಪರಿಗಣಿಸಲಾಗುವುದು.

(viii) ಪಾರದರ್ಶಕತೆಗಾಗಿ ಮೇಲೆ ಹೇಳಿದ ಎಲ್ಲಾ ದೈಹಿಕ ತಾಳ್ವಿಕೆ / ದೈಹಿಕ ಸಮರ್ಥತೆ ಪರೀಕ್ಷೆಗಳನ್ನು ವಿಡಿಯೋಗ್ರಫಿ ಅಥವಾ CCTV Camera ಗಳಲ್ಲಿ ಸೆರೆ ಹಿಡಿಯಲಾಗುವುದು.

(ix) ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಾವಳಿಗಳು 2021 ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: FEE 203 FEG 2015 ದಿನಾಂಕ: 06.08.2019 ರ ಕರ್ನಾಟಕ ಅರಣ್ಯ ಇಲಾಖೆ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು 2019 ರನ್ವಯ ಶಾರೀರಿಕ ಮಾನದಂಡಗಳ ಪರೀಕ್ಷೆ, ದೈಹಿಕ ತಾಳ್ಮಿಕೆ ಪರೀಕ್ಷೆ ಮತ್ತು ದೈಹಿಕ ಸಮರ್ಥತೆ ಪರೀಕ್ಷೆಗಳನ್ನು ಪೂರ್ಣಗೊಳಿಸದ ಹೊರತು ಅಂತಹ ಅಭ್ಯರ್ಥಿಯು ನೇಮಕಾತಿಗೆ ಅರ್ಹನಾಗಿರತಕ್ಕದ್ದಲ್ಲ.

**11. ಮೆರಿಟ್ ಪಟ್ಟಿ:**

ದೈಹಿಕ ತಾಳ್ಮಿಕೆ ಪರೀಕ್ಷೆ [Physical Endurance Test] ಮತ್ತು ದೈಹಿಕ ಸಮರ್ಥತೆ [Physical Efficiency Test] ಪರೀಕ್ಷೆಯಲ್ಲಿ ಅರ್ಹತೆ ಪಡೆದ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳ ವೃತ್ತ ಮಟ್ಟದ ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸಲಾಗುವುದು. ಸದರಿ ಪಟ್ಟಿಯಲ್ಲಿ ಇಬ್ಬರು ಅಥವಾ ಅದಕ್ಕಿಂತ ಹೆಚ್ಚು ಅಭ್ಯರ್ಥಿಗಳು ಪಡೆದ ಒಟ್ಟು ಅಂಕಗಳು ಸಮಾನವಾಗಿದ್ದರೆ, ವಯಸ್ಸಿನಲ್ಲಿ ಹಿರಿಯರನ್ನು ಕಿರಿಯರಿಗಿಂತ ಮೇಲಕ್ಕೆ ಇರಿಸಲಾಗುತ್ತದೆ ಮತ್ತು ಅದರ ಪ್ರಕಾರ ಇಂಟರ್-ಸೆ (Inter-se) ಮೆರಿಟ್ ನಿರ್ಧರಿಸಲಾಗುತ್ತದೆ.

**12. ತಾತ್ಕಾಲಿಕ ಆಯ್ಕೆ ಪಟ್ಟಿ:**

ದೈಹಿಕ ತಾಳ್ಮಿಕೆ ಪರೀಕ್ಷೆ [Physical Endurance Test] ಮತ್ತು ದೈಹಿಕ ಸಮರ್ಥತೆ [Physical Efficiency Test] ಪರೀಕ್ಷೆಯಲ್ಲಿ ಅರ್ಹತೆ ಪಡೆದ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಮತ್ತು ಪ್ರಚಲಿತ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮ ಹಾಗೂ ಪ್ರವರ್ಗವಾರು ಮೀಸಲಾತಿ ನಿಯಮಗಳನುಸಾರ ಈ ಅಧಿಸೂಚನೆಯಲ್ಲಿ ಅಧಿಸೂಚಿಸಿರುವ ಪ್ರವರ್ಗವಾರು ಖಾಲಿ ಹುದ್ದೆಗಳಿಗೆ 1:1 (ಹುದ್ದೆ : ಅಭ್ಯರ್ಥಿ) ಅನುಪಾತದಲ್ಲಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ ಕರ್ನಾಟಕ ಅರಣ್ಯ ಇಲಾಖೆಯ ಅಧಿಕೃತ ಜಾಲತಾಣ https://aranya.gov.in/ ಮುಖಪುಟದ ಕೆಳಭಾಗದಲ್ಲಿರುವ "ನೇಮಕಾತಿ" ಶೀರ್ಷಿಕೆಯಡಿ ಪ್ರಕಟಿಸಲಾಗುವುದು.

**13 . ಮೂಲ ದಾಖಲೆಗಳ ಪರಿಶೀಲನೆ:**

13.1 ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳು ಆನ್ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ಅರ್ಜಿಯಲ್ಲಿ ಭರ್ತಿ ಮಾಡಿರುವ ಮಾಹಿತಿ / ವಿವರಗಳ ಆಧಾರದನ್ವಯ ಮೂಲ ದಾಖಲೆ / ಪ್ರಮಾಣಪತ್ರಗಳ ಪರಿಶೀಲನೆಗೆ ಸೂಚಿತ ದಿನಾಂಕದಂದು ಹಾಜರಾಗಲು ಆಯ್ಕೆ ಪ್ರಾಧಿಕಾರದ ವತಿಯಿಂದ ಕರ್ನಾಟಕ ಅರಣ್ಯ ಇಲಾಖೆಯ ಅಧಿಕೃತ ಜಾಲತಾಣ https://aranya.gov.in/ ಮುಖಪುಟದ ಕೆಳಭಾಗದಲ್ಲಿರುವ "ನೇಮಕಾತಿ" ಶೀರ್ಷಿಕೆಯಡಿ ತಿಳಿಸಲಾಗುವುದು. ಸದರಿ ಸೂಚಿತ ದಿನಾಂಕದಂದು ಮೂಲ ದಾಖಲೆ / ಪ್ರಮಾಣಪತ್ರಗಳ ಪರಿಶೀಲನೆಗೆ ಆಯ್ಕೆ ಪ್ರಾಧಿಕಾರಿಗಳ ಸಮ್ಮುಖ ಕಡ್ಡಾಯವಾಗಿ ಹಾಜರಾಗುವುದು.

13.2 ಅಭ್ಯರ್ಥಿಗಳು ಆನ್ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಪ್ಲೋಡ್ ಮಾಡಿರುವ ಎಲ್ಲಾ ದಾಖಲೆ / ಪ್ರಮಾಣಪತ್ರಗಳನ್ನು ಮೂಲ ದಾಖಲಾತಿಗಳ ಪರಿಶೀಲನಾ ವೇಳೆ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ಮೂಲ ದಾಖಲೆ / ಪ್ರಮಾಣಪತ್ರಗಳ ಪರಿಶೀಲನೆಯಲ್ಲಿ ಯಾವುದೇ ರೀತಿಯ ಗೊಂದಲ / ವ್ಯತಿರಿಕ್ತ ದಾಖಲೆ / ಪ್ರಮಾಣಪತ್ರಗಳನ್ನು ಸಲ್ಲಿಸಿದ್ದಲ್ಲಿ ಅಂತಹ ದಾಖಲೆ / ಪ್ರಮಾಣಪತ್ರಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಅರ್ಜಿಯಲ್ಲಿ ನಮೂದಿಸಿರುವ ದಾಖಲಾತಿಗಳನ್ನು ನಿಗದಿತ ದಿನಾಂಕದಂದು ಸಲ್ಲಿಸಲು ವಿಫಲರಾದಲ್ಲಿ / ಗೈರುಹಾಜರಾದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು ಹಾಗೂ ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

13.3 ಅಭ್ಯರ್ಥಿಯು ಎಲ್ಲಾ ಸಂದರ್ಭದಲ್ಲಿಯೂ ಒಂದೇ ತರಹದ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು. ಈ ಬಗ್ಗೆ ಅಭ್ಯರ್ಥಿಗಳು ಬಹಳ ಎಚ್ಚರಿಕೆ ವಹಿಸುವುದು.

**14. ಅಂತಿಮ ಆಯ್ಕೆ ಪಟ್ಟಿ:**

ವೃತ್ತ ಮಟ್ಟದಲ್ಲಿ ಅಧಿಸೂಚಿಸಲಾದ ಖಾಲಿ ಹುದ್ದೆಗಳ ಸಂಖ್ಯೆಗೆ ಸಮಾನವಾದ 1:1 (ಹುದ್ದೆ : ಅಭ್ಯರ್ಥಿ) ಅನುಪಾತದಲ್ಲಿ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಯಲ್ಲಿ ಹಾಗೂ ವೈದ್ಯಕೀಯ ಪರೀಕ್ಷೆಗಳಲ್ಲಿ ಅರ್ಹತೆ ಪಡೆದ ಅಭ್ಯರ್ಥಿಗಳನ್ನು ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಮತ್ತು ಪ್ರಚಲಿತ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮ ಹಾಗೂ ಪ್ರವರ್ಗವಾರು ಮೀಸಲಾತಿ ನಿಯಮಗಳನುಸಾರ ಅಧಿಸೂಚನೆಯಲ್ಲಿ ಅಧಿಸೂಚಿಸಿರುವ ಪ್ರವರ್ಗವಾರು ಖಾಲಿ ಹುದ್ದೆಗಳಿಗೆ 1:1 (ಹುದ್ದೆ : ಅಭ್ಯರ್ಥಿ) ಅನುಪಾತದಲ್ಲಿ ಅಭ್ಯರ್ಥಿಗಳನ್ನು ಅರಣ್ಯ ವೀಕ್ಷಕ ವೃಂದದ ಹುದ್ದೆಗೆ ಅಂತಿಮವಾಗಿ ಆಯ್ಕೆ ಮಾಡಿ,

ಅಂತಿಮ ಆಯ್ಕೆ ಪಟ್ಟಿಯನ್ನು ಕರ್ನಾಟಕ ಅರಣ್ಯ ಇಲಾಖೆಯ ಅಧಿಕೃತ ಜಾಲತಾಣ https://aranya.gov.in/ ಮುಖಪುಟದ ಕೆಳಭಾಗದಲ್ಲಿರುವ "ನೇಮಕಾತಿ" ಶೀರ್ಷಿಕೆಯಡಿ ಪ್ರಕಟಿಸಲಾಗುವುದು.

**15. ವಿವಿಧ ಪ್ರವರ್ಗಗಳಡಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಲ್ಲಿಸಬೇಕಾದ ದಾಖಲೆ / ಪ್ರಮಾಣಪತ್ರಗಳ ವಿವರ ಈ ಕೆಳಕಂಡಂತಿದೆ:**

[ಟಿಪ್ಪಣಿ: ಸಕ್ಷಮ ಪ್ರಾಧಿಕಾರವು ನಿಗದಿತ ನಮೂನೆಯಲ್ಲಿ ಜಾರಿಗೊಳಿಸಿದ ಈ ಕೆಳಗಿನ ಎಲ್ಲಾ ಪ್ರಮಾಣಪತ್ರಗಳನ್ನು ಅಭ್ಯರ್ಥಿ ಆನ್ಲೈನ್ ಅರ್ಜಿ ಸಲ್ಲಿಸುವಾಗಲೇ ಕಡ್ಡಾಯವಾಗಿ ಅರ್ಜಿಯೊಂದಿಗೆ ಅಪ್ಲೋಡ್ ಮಾಡುವುದು. ಮೀಸಲಾತಿ ಕೋರುವ ನಿಗದಿತ ದಾಖಲಾತಿಯನ್ನು ಆನ್ಲೈನ್ ಅರ್ಜಿಯೊಂದಿಗೆ ಅಪ್ಲೋಡ್ ಮಾಡದಿದ್ದಲ್ಲಿ, ಅಂತಹ ಮೀಸಲಾತಿಗೆ ಅಭ್ಯರ್ಥಿಯನ್ನು ಪರಿಗಣಿಸಲಾಗುವುದಿಲ್ಲ.]

15.1 ಜನ್ಮ ದಿನಾಂಕದ ದೃಢೀಕರಣದ ಕುರಿತು ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿ / ಸಿ.ಬಿ.ಎಸ್.ಇ. / ಐ.ಸಿ.ಎಸ್.ಇ. ಮಂಡಳಿಯು ನಡೆಸುವ 10ನೇ ತರಗತಿಯ ಪರೀಕ್ಷೆಯ ಅಂಕಪಟ್ಟಿ.
15.2 ಶೈಕ್ಷಣಿಕ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿಗಳು.

15.3 ಜಾತಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಈ ಕೆಳಕಂಡ ನಿಗದಿತ ನಮೂನೆಗಳಲ್ಲಿ ಪ್ರಮಾಣಪತ್ರವನ್ನು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವಂತೆ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದು, ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದು ಆನ್ಲೈನ್ ಸಲ್ಲಿಸುವ ಸಮಯದಲ್ಲಿ ಅಪ್ಲೋಡ್ ಮಾಡತಕ್ಕದ್ದು.

| | |
|---|---|
| ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು | ನಮೂನೆ'ಡಿ' |
| ಪ್ರವರ್ಗ– I ಕ್ಕೆ ಸೇರಿದ ಅಭ್ಯರ್ಥಿಗಳು | ನಮೂನೆ'ಇ' |
| ಪ್ರವರ್ಗ – IIಎ, IIಬಿ, IIIಎ ಮತ್ತು IIIಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು | ನಮೂನೆ'ಎಫ್' |

ಹಿಂದುಳಿದ ವರ್ಗಗಳ ಪ್ರವರ್ಗ – IIಎ, IIಬಿ, IIIಎ ಮತ್ತು IIIಬಿ ಮೀಸಲಾತಿ ಪ್ರಮಾಣಪತ್ರಗಳು 05 ವರ್ಷ ಚಾಲ್ತಿಯಿರುತ್ತವೆ (Government Notification No. SWD 155 BCA 2012 Dt: 17.02.2012 ರನ್ವಯ). ಅಭ್ಯರ್ಥಿಗಳು ಪಡೆದಿರುವ ಪ್ರಮಾಣಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ – I ರ ಅಭ್ಯರ್ಥಿಗಳು ಪಡೆದಿರುವ / ಪಡೆಯುವ ಪ್ರಮಾಣಪತ್ರಗಳು ಜೀವಿತಾವಧಿಯವರೆಗೆ ಅಥವಾ ರದ್ದು ಮಾಡುವವರೆಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣಪತ್ರಗಳನ್ನು ದಿನಾಂಕದ ಕಾಲಮಿತಿಯಿಲ್ಲದೆ ಪರಿಗಣಿಸಲಾಗುವುದು. [ಸರ್ಕಾರದ ಸುತ್ತೋಲೆ ಸಂಖ್ಯೆ: SWD 155 BCA 2011 Dt. 22.02.2012]

**15.4 ಮಾಜಿ ಸೈನಿಕರಿಗೆ ಮೀಸಲಾತಿ:**

ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೇ) ಸೇವೆ ಸಲ್ಲಿಸಿರುವ ವ್ಯಕ್ತಿ ಎಂದು ಅರ್ಥ. ಅಂದರೆ, ರಕ್ಷಣಾ ಭದ್ರತಾ ದಳ (Defence Security Corps), ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್ (General Reserved Engineering Force), ಲೋಕ ಸಹಾಯಕ ಸೇನಾ (Lok Sahayak Sena) ಮತ್ತು ಪ್ಯಾರಾಮಿಲಿಟರಿ ದಳ (Para Military Forces) ದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು
(a) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

(b) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆ ಆದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆ ಆದವನು

ಅಥವಾ

(c) ಸ್ವಂತ ಕೋರಿಕೆ ಹೊರತುಪಡಿಸಿ, ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ



Reddy

ಅಥವಾ

(d) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

(i) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

(ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯ ಹೊಂದಿ ಬಿಡುಗಡೆ ಆದ ವ್ಯಕ್ತಿ.

(iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

**ವಿವರಣೆ:**

(1) ಕೇಂದ್ರ ಸಶಸ್ತ್ರ ದಳದ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರಿಗೆ ರಾಜ್ಯ ನಾಗರಿಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

(2) ಸೈನಿಕರ ಸೇವಾ ಒಪ್ಪಂದವನ್ನು ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಪಡೆದು ಅದರ ಮೂಲ ಪ್ರತಿಯನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು.

**ಗಮನಿಸಿ:** BSF, CRPF, CISF ಪಡೆಗಳಿಂದ ನಿವೃತ್ತರಾದವರನ್ನು "ಮಾಜಿ ಸೈನಿಕ" ಎಂದು ಪರಿಗಣಿಸಲಾಗುವುದಿಲ್ಲ.

(3) ಕರ್ನಾಟಕ ನಾಗರಿಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ರ ನಿಯಮ 9(1) ರನ್ವಯ ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು, ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರ ದಳದ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣಪತ್ರ ಮತ್ತು ಸೈನಿಕ ಬೋರ್ಡ್ನಿಂದ ಪ್ರಮಾಣಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದು ಆನ್ಲೈನ್ ಅರ್ಜಿ ಸಲ್ಲಿಸುವ ಸಮಯದಲ್ಲಿ ಅಪ್ಲೋಡ್ ಮಾಡತಕ್ಕದ್ದು.

**ಟಿಪ್ಪಣಿ:**

(i) ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಆ ಮೀಸಲಾತಿಗೆ ಅರ್ಹರೇ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡ್ನಿಂದ ತಿಳಿದುಕೊಂಡು ಅರ್ಜಿಯನ್ನು ಸಲ್ಲಿಸಲು ತಿಳಿಸಿದೆ.

(ii) ಸೈನ್ಯದಿಂದ ನಿವೃತ್ತಿ ಹೊಂದಿರುವ ಮಾಜಿ ಸೈನಿಕರ ಹೆಂಡತಿ ಅಥವಾ ಮಕ್ಕಳು ಮತ್ತು ಮಲಮಕ್ಕಳು ಮಾಜಿ ಸೈನಿಕ ಮೀಸಲಾತಿಗೆ ಅರ್ಹರಿರುವುದಿಲ್ಲ. ಆದರೆ ಕೇಂದ್ರ ಸಶಸ್ತ್ರ ಸೇನೆಯಲ್ಲಿ ಸೇವೆ ಸಲ್ಲಿಸುವಾಗ ಹತರಾದ / ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ಮಾಜಿ ಸೈನಿಕರ ಹೆಂಡತಿ ಅಥವಾ ಮಕ್ಕಳು ಮತ್ತು ಮಲಮಕ್ಕಳು ಮಾತ್ರ ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ.

**15.5 ಅಂಗವಿಕಲ ಅಭ್ಯರ್ಥಿ ಮೀಸಲಾತಿ:**

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 149 ಎಸ್ಆರ್ಆರ್ 2020, ದಿನಾಂಕ: 25.09.2020 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ 'ಎ' ಮತ್ತು 'ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 4 ರಷ್ಟು ಮತ್ತು ಗ್ರೂಪ್ 'ಸಿ' ಹುದ್ದೆಗಳಿಗೆ ಶೇಕಡ 5 ರಷ್ಟು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19.11.2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ, ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್ಪಿ 2010, ದಿನಾಂಕ: 18.02.2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ / ತಾಲ್ಲೂಕು



hredd

ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ / ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್ಲೋಡ್ ಮಾಡತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣಪತ್ರಗಳನ್ನು / ಗುರುತಿನ ಚೀಟಿಗಳನ್ನು ಪರಿಗಣಿಸಲಾಗುವುದಿಲ್ಲ.

**ವಿಶೇಷ ಸೂಚನೆ:**

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಬ್ಲ್ಯು ಸಿ ಡಿ 111 ಪಿ ಹೆಚ್ ಪಿ 2022, ದಿನಾಂಕ: 19.08.2023 ರನ್ವಯ [in exercise of the powers conferred under Sub-section (1) of section 34 of the Rights of Person with Disabilities Act 2016, the Government of Karnataka hereby identifies the post specified in the Schedule-II (Sl.No. 3 - Forest Watcher – Group D) – Categories of disabilities identified by Expert Committee] ಅರಣ್ಯ ವೀಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಅಭ್ಯರ್ಥಿಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಅಂಗವಿಕಲ ಅಭ್ಯರ್ಥಿಗಳಿಗೆ ಮೀಸಲಾಗಿರುವ ಮೀಸಲಾತಿಯಡಿಯಲ್ಲಿ **LC – Leprosy Cured, AAV – Acid Attack Victims and MI – Mental Illness ಮಾತ್ರ ಭರ್ತಿ ಮಾಡಲು ಅವಕಾಶವಿರುತ್ತದೆ.**

**15.6 ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಾತಿ:**

ಯೋಜನೆಗಳಿಂದ ನಿರ್ವಸಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂಖ್ಯೆ: DPAR 23 SRR 99, ದಿನಾಂಕ: 23.11.2000 ರನ್ವಯ ಮತ್ತು ತಿದ್ದುಪಡಿ ಆದೇಶ ಸಂಖ್ಯೆ: ಸಿಆಸುಇ 252 ಸೇನೆನಿ 2020 (ಭಾಗ-1), ದಿನಾಂಕ: 07.07.2021 (ಈ ನಿಯಮಗಳು ಜಾರಿಯಾಗುವ 25 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳು ಈ ಮೀಸಲಾತಿಗೆ ಅನ್ವಯವಾಗುವುದಿಲ್ಲ) ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 44 ಸೇನೆನಿ 2001, ದಿನಾಂಕ: 27.07.2001 ರಲ್ಲಿ ನಿಗದಿಪಡಿಸಿರುವ ನಮೂನೆ-3 ರಲ್ಲಿ ಸಂಬಂಧಪಟ್ಟ ತಹಶೀಲ್ದಾರ್ರವರಿಂದ ನೀಡಿರುವ ಪ್ರಮಾಣಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದು ಆನ್ಲೈನ್ ಅರ್ಜಿ ಸಲ್ಲಿಸುವ ಸಮಯದಲ್ಲಿ ಅಪ್ಲೋಡ್ ಮಾಡತಕ್ಕದ್ದು.

**15.7 ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಾತಿ:**

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 71 ಸೇನೆನಿ 2001, ದಿನಾಂಕ: 24.10.2002 ರನ್ವಯ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಅಭ್ಯರ್ಥಿಗಳು 1 ರಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದು, ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಪ್ರಮಾಣಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದು ಆನ್ಲೈನ್ ಅರ್ಜಿ ಸಲ್ಲಿಸುವ ಸಮಯದಲ್ಲಿ ಅಪ್ಲೋಡ್ ಮಾಡತಕ್ಕದ್ದು.

**15.8 ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಾತಿ:**

15.8.1 ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು 1 ರಿಂದ 10 ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರಬೇಕು, ಮತ್ತು

15.8.2 ಅಭ್ಯರ್ಥಿಯು ವ್ಯಾಸಂಗ ಮಾಡಿದ ಸ್ಥಳವು ವ್ಯಾಸಂಗ ಮಾಡಿದ ಅವಧಿಯಲ್ಲಿ ಅಂದಿನ ಕರ್ನಾಟಕ ಪೌರನಿಗಮಗಳ ಅಧಿನಿಯಮ 1976 ರ ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಅಡಿಯಲ್ಲಿ ನಿರ್ದಿಷ್ಟಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಒಂದು ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆಯ ಹಂತದಲ್ಲಿರುವ ಪ್ರದೇಶಗಳ ಹೊರತಾಗಿ ಇತರೆ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಯಾಗಿರಬೇಕು, ಮತ್ತು

15.8.3 ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ಕರ್ನಾಟಕ ಅಧಿಸೂಚನೆ ಸಂಖ್ಯೆ: ಸಿಆಸುಇ 8 ಸೇನೆನಿ 2001, ದಿನಾಂಕ: 13.02.2001 ರ ಪ್ರಕಾರ ಮೇಲೆ ಪರಿಭಾಷಿಸಿದಂತೆ ತರಗತಿ 1 ರಿಂದ 10 ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರುವವರು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 96 ಸೇನೆನಿ 2005, ದಿನಾಂಕ: 10.08.2005 ರಲ್ಲಿ ನಿಗದಿಪಡಿಸಿದ ನಮೂನೆ-2 ರ ಪ್ರಮಾಣಪತ್ರವನ್ನು ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಮತ್ತು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುಸಹಿ



Wredy

ಮಾಡಿಸಿದ ಪ್ರಮಾಣಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದು ಆನ್ಲೈನ್ ಅರ್ಜಿ ಸಲ್ಲಿಸುವ ಸಮಯದಲ್ಲಿ ಅಪ್ಲೋಡ್ ಮಾಡತಕ್ಕದ್ದು. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ಅಭ್ಯರ್ಥಿಗಳಿಗೆ ನಿಗದಿತ ನಮೂನೆ-1 (ನಾನ್-ಕ್ರೀಮಿಲೇಯರ್) ಮತ್ತು ನಮೂನೆ-2 ಕಡ್ಡಾಯವಾಗಿರುತ್ತದೆ.

15.8.4 ಅಂತೆಯೇ, ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I, ಪ್ರವರ್ಗ-IIಎ, ಪ್ರವರ್ಗ-IIಬಿ, ಪ್ರವರ್ಗ-IIIಎ, ಪ್ರವರ್ಗ-IIIಬಿ ಸೇರಿದ ಅಭ್ಯರ್ಥಿಗಳು ನಮೂನೆ-2 ರಲ್ಲಿ ಪ್ರಮಾಣಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದು ಆನ್ಲೈನ್ ಅರ್ಜಿ ಸಲ್ಲಿಸುವ ಸಮಯದಲ್ಲಿ ಅಪ್ಲೋಡ್ ಮಾಡತಕ್ಕದ್ದು.

**ಸೂಚನೆ:** ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I, ಪ್ರವರ್ಗ-IIಎ, ಪ್ರವರ್ಗ-IIಬಿ, ಪ್ರವರ್ಗ-IIIಎ, ಪ್ರವರ್ಗ-IIIಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ಮೀಸಲಾತಿ ಪ್ರಮಾಣಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳು Non-Creamy Layer ಪ್ರಮಾಣಪತ್ರವನ್ನು ಹೊಂದಿರದಿದ್ದಲ್ಲಿ ಅವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.

### 15.9 ತೃತೀಯಲಿಂಗ ಅಭ್ಯರ್ಥಿಗಳಿಗೆ ಮೀಸಲಾತಿ:

ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಅಧಿಸೂಚನೆಯನ್ವಯ ಕೇಂದ್ರ ಸರ್ಕಾರವು ಹೊರಡಿಸಿರುವ ತೃತೀಯಲಿಂಗ ವ್ಯಕ್ತಿಗಳ (ರಕ್ಷಣೆ ಹಕ್ಕುಗಳು) ನಿಯಮಗಳು 2020 ರನ್ವಯ ಸಂಬಂಧಪಟ್ಟ ಪ್ರಮಾಣಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪಡೆಯತಕ್ಕದ್ದು. ಸದರಿ ಪ್ರಮಾಣಪತ್ರ ಹೊಂದಿರದಿದ್ದಲ್ಲಿ ತೃತೀಯಲಿಂಗದ ಮೀಸಲಾತಿಗೆ ಪರಿಗಣಿಸಲಾಗುವುದಿಲ್ಲ.

### 15.10 ಸ್ಥಳೀಯ ಅರಣ್ಯ ಬುಡಕಟ್ಟು ಪರಿಶಿಷ್ಟ ಪಂಗಡ [Local Forest Dwelling Tribes] ಅಭ್ಯರ್ಥಿಗಳಿಗೆ ಮೀಸಲಾತಿ:

ಸ್ಥಳೀಯ ಅರಣ್ಯ ಬುಡಕಟ್ಟು ಪರಿಶಿಷ್ಟ ಪಂಗಡ [Local Forest Dwelling Tribes] ಮೀಸಲಾತಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: FEE 203 FEG 2015, ದಿನಾಂಕ: 06.08.2019 ರ ಕರ್ನಾಟಕ ಅರಣ್ಯ ಇಲಾಖೆ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2019 ರ ವೃಂದ ಮತ್ತು ನೇಮಕಾತಿ ನಿಯಮಾವಳಿಯ ಕ್ರಮ ಸಂಖ್ಯೆ: 53 ರಲ್ಲಿ ಈ ಕೆಳಕಂಡಂತೆ ನಿಯಮವಿರುತ್ತದೆ.

Provided that fifty percent of the vacancies arising in the Territorial jurisdiction of each one of the following Wildlife Divisions / Tiger Reserves, namely;

(a) Bandipur Tiger Reserve;

(b) Nagarahole Tiger Reserve;

(c) BRT Tiger Reserve, Chamarajanagar;

(d) Cauvery Wildlife Division, Kanakapura;

(e) Bhandra Tiger Reserve, Chikkamagaluru;

(f) Kudremukh Wildlife Division, Karkala;

(g) Madikeri Wildlife Division, Madikeri;

(h) MM Hills Wildlife Division, Kollegal;

(i) Bannerughatta Wildlife Division, Bengaluru;

(j) Kali Tiger Reserve, Dandeli; and

(k) Shivamoga Wildlife Division, Shivamogga;

shall be filled up from among the candidates who belong to the respective local forest dwelling Scheduled Tribes in the district, namely Jenu Kuruba, Kadu Kuruba, Hakkipikki, Soliga, Soligaru, Yerava, Gowdlu, Irular, Iruliga, Koraga, Melakudi, Malaikudi, Maleru, Meda and Thoda who have studied in the taluks in which the Wildlife Division / Tiger Reserve is located for one or more years while studying from 1st Standard to 12th Standard and further such candidate shall indicate his / her preference in the order of choice (1, 2, 3...) for the Wildlife Division / Tiger Reserve for which he / she is eligible in the circle to which he / his is applying for.

ಮೇಲ್ಕಂಡ ಸ್ಥಳೀಯ ಅರಣ್ಯ ಬುಡಕಟ್ಟು ಪರಿಶಿಷ್ಟ ಪಂಗಡ [Local Forest Dwelling Tribes] ಅಭ್ಯರ್ಥಿಗಳು 1 ನೇ ತರಗತಿಯಿಂದ 12 ನೇ ತರಗತಿಯವರೆಗೆ ಒಂದು ಅಥವಾ ಅದಕ್ಕಿಂತ ಹೆಚ್ಚು ವರ್ಷಗಳ ಕಾಲ ವಿದ್ಯಾಭ್ಯಾಸ ಮಾಡಿದ ಬಗ್ಗೆ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರಿಂದ ನೀಡಲಾದ "ನಮೂನೆ-2" ಪ್ರಮಾಣಪತ್ರವನ್ನು ಪಡೆದು, ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿದ ಪ್ರಮಾಣಪತ್ರವನ್ನು ಹಾಗೂ ವಾಸಸ್ಥಳದ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್‌ರವರಿಂದ ನಿಗದಿತ ದೃಢೀಕರಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದು ಆನ್ಲೈನ್ ಅರ್ಜಿ ಸಲ್ಲಿಸುವ ಸಮಯದಲ್ಲಿ ಅಪ್ಲೋಡ್ ಮಾಡತಕ್ಕದ್ದು.

**ವಿಶೇಷ ಸೂಚನೆ:**

ಅಭ್ಯರ್ಥಿಗಳು ಆನ್ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದರಿಂದ, ಈ ಮೇಲಿನ ಎಲ್ಲಾ ಪ್ರಮಾಣಪತ್ರಗಳು / ದಾಖಲಾತಿಗಳು ಆನ್ಲೈನ್ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಿಂಧುವಾಗಿರಬೇಕು. ಆಯ್ಕೆ ಪ್ರಾಧಿಕಾರವು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ, ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮೀಸಲಾತಿಯ ಪ್ರಮಾಣಪತ್ರಗಳ ಮೂಲ ಪ್ರತಿಗಳನ್ನು ತಪ್ಪದೆ ಹಾಜರುಪಡಿಸತಕ್ಕದ್ದು.

**16. ಸೂಚನೆಗಳು:**

16.1 ಅರಣ್ಯ ವೀಕ್ಷಕ ಹುದ್ದೆಗಳ ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿರುವ ಎಲ್ಲಾ ವೃತ್ತಗಳಲ್ಲಿಯೂ ಏಕಕಾಲದಲ್ಲಿ ನೇಮಕಾತಿಗೆ ಸಂಬಂಧಿಸಿದ ಶಾರೀರಿಕ ಮಾನದಂಡಗಳ ಪರೀಕ್ಷೆ, ದೈಹಿಕ ತಾಳ್ವಿಕೆ ಪರೀಕ್ಷೆ ಮತ್ತು ದೈಹಿಕ ಸಮರ್ಥತೆ ಪರೀಕ್ಷೆಗಳನ್ನು ನಡೆಸಲಾಗುವುದು.

16.2 ಅಭ್ಯರ್ಥಿಗಳು ನೇರ ನೇಮಕಾತಿಯ ಎಲ್ಲಾ ಪರೀಕ್ಷೆಗಳಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು ಹಾಗೂ ಈ ಎಲ್ಲಾ ಪರೀಕ್ಷೆಗಳು ಒಂದಕ್ಕಿಂತ ಹೆಚ್ಚಿನ ದಿನ ನಡೆಯುವ ಸಾಧ್ಯತೆ ಇರುವುದರಿಂದ ಈ ಬಗ್ಗೆ ಎಲ್ಲಾ ಪೂರ್ವಸಿದ್ಧತೆ ಹಾಗೂ ತಂಗುವಿಕೆ ಬಗ್ಗೆ ಸ್ವಂತ ಖರ್ಚಿನಲ್ಲಿ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು.

16.3 10 ನೇ ತರಗತಿ ವಿದ್ಯಾಭ್ಯಾಸದಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಅಭ್ಯಾಸಿಸದೇ ಇರುವ ಅಭ್ಯರ್ಥಿಗಳಿಗೆ ಕರ್ನಾಟಕ ಸಿವಿಲ್ ಸೇವೆಗಳು (ನೇಮಕಾತಿ) (ಕನ್ನಡ ಭಾಷಾ ಪರೀಕ್ಷೆ) ನಿಯಮಗಳು, 1984 ಕ್ಕೆ ಪೂರಕವಾಗಿ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 69 ಎಸ್ಸಿಆರ್ 84, ದಿನಾಂಕ: 23.09.1985 ರಲ್ಲಿ ಸೂಚಿಸಿದ ಪ್ರಕಾರ ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನವನ್ನು ಪರೀಕ್ಷಿಸಲು ನಿಗದಿಪಡಿಸಿದ ಕನ್ನಡ ಭಾಷಾ



Reddy

ಪರೀಕ್ಷೆಯಲ್ಲಿ ಉತ್ತೀರ್ಣರಾದ ನಂತರವೇ ಅಭ್ಯರ್ಥಿಗಳು ನೇಮಕಾತಿ ಹೊಂದಲು ಅರ್ಹರಾಗುತ್ತಾರೆ. ಕನ್ನಡ ಭಾಷಾ ಪರೀಕ್ಷೆಯಲ್ಲಿ ಅನುತ್ತೀರ್ಣರಾಗುವ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

16.4 ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಪಡೆದ ಅಂಕಗಳ ಮೆರಿಟ್ ಆಧಾರದಲ್ಲಿ ಹಾಗೂ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮ ಮತ್ತು ಪ್ರವರ್ಗವಾರು ಮೀಸಲಾತಿ ನಿಯಮಗಳ ಪ್ರಕಾರ ಪರಿಗಣಿಸಿ 1:1 (ಹುದ್ದೆ : ಅಭ್ಯರ್ಥಿ) ಅಂತಿಮ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.

**17. ನೇಮಕಾತಿ ಹೊಂದಿದ ಅಭ್ಯರ್ಥಿಗಳ ತರಬೇತಿ, ಪರೀಕ್ಷಾರ್ಥ ಅವಧಿ ಹಾಗೂ ಸ್ಥಳ ನಿಯುಕ್ತಿ:**

ಅರಣ್ಯ ವೀಕ್ಷಕರಾಗಿ ನೇಮಕಗೊಂಡ ನಂತರ ಸದರಿ ಅಭ್ಯರ್ಥಿಯು ತರಬೇತಿಗೆ ಹಾಜರಾಗುವ ಮೊದಲು ನೇಮಕಾತಿ ಪ್ರಾಧಿಕಾರದ ಸಮಕ್ಷಮ ಇಲಾಖೆಯಲ್ಲಿ ನೇಮಕಾತಿಯಾದ ದಿನಾಂಕದಿಂದ ಕನಿಷ್ಠ ಮೂರು (3) ವರ್ಷ ಸೇವೆ ಸಲ್ಲಿಸುವುದಾಗಿ, ತಪ್ಪಿದಲ್ಲಿ ತರಬೇತಿಯ ಬಗ್ಗೆ ಭರಿಸಿದ ಸಂಪೂರ್ಣ ವೆಚ್ಚವನ್ನು (ಸರ್ಕಾರವು ನಿಗದಿಪಡಿಸಿದ ಮಾನದಂಡಗಳಂತೆ) ಸರ್ಕಾರಕ್ಕೆ ಪಾವತಿ ಮಾಡಲು ಮತ್ತು ಆಯ್ಕೆ ಪ್ರಾಧಿಕಾರ ನಿಗದಿಪಡಿಸುವ ಇತರೆ ಷರತ್ತುಗಳನ್ನು ಪೂರೈಸಲು ಸಿದ್ಧವಿರುವುದಾಗಿ, ಹಾಗೂ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿ, ಅಲ್ಲದೆ ಸರ್ಕಾರವು ಸೂಚಿಸಿದ ಯಾವುದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸಲು ಸಿದ್ಧವಿರುವುದಾಗಿ (ರೂ. 100) ಛಾಪಾ ಕಾಗದದಲ್ಲಿ ಅಭ್ಯರ್ಥಿಯು ಕರಾರು ಪತ್ರವನ್ನು ಬರೆದುಕೊಡತಕ್ಕದ್ದು.

ನೇಮಕಾತಿ ಹೊಂದಿದ ಅಭ್ಯರ್ಥಿಗಳು ಆಯಾ ಹುದ್ದೆಗೆ ನಿಗದಿಪಡಿಸಿದ ವೃತ್ತಿ ಬುನಾದಿ ತರಬೇತಿಯನ್ನು ಯಶಸ್ವಿಯಾಗಿ ಪೂರೈಸಬೇಕಾಗಿರುತ್ತದೆ. ನಿಗದಿಪಡಿಸಿದ ವೃತ್ತಿ ಬುನಾದಿ ತರಬೇತಿ ಅವಧಿ ಹಾಗೂ ಪರೀಕ್ಷಾರ್ಥ ಅವಧಿಯ ವಿವರ ಕೆಳಕಂಡಂತಿದೆ.

| ಹುದ್ದೆ | ವೃತ್ತಿಬುನಾದಿತರಬೇತಿಅವಧಿ | ಪರೀಕ್ಷಾರ್ಥಅವಧಿ (ತರಬೇತಿಅವಧಿಸೇರಿ) |
|---|---|---|
| ಅರಣ್ಯವೀಕ್ಷಕ | 6 ತಿಂಗಳು | 36 ತಿಂಗಳು |

ಕರ್ನಾಟಕ ಅರಣ್ಯ ಇಲಾಖೆಯಲ್ಲಿ ಪ್ರಸ್ತುತ ವರ್ಗಾವಣೆ/ಸ್ಥಳನಿಯುಕ್ತಿ ಸಂಬಂಧ ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ (ಅರಣ್ಯ ಅಧಿಕಾರಿಗಳ ಮತ್ತು ಇತರೆ ಸಿಬ್ಬಂದಿಗಳ ವರ್ಗಾವಣೆ ಮತ್ತು ಸ್ಥಳ ನಿಯುಕ್ತಿಗಳ ನಿಯಂತ್ರಣ) ಅಧಿನಿಯಮ 2016 ಹಾಗೂ ನಿಯಮಾವಳಿ 2019 ಚಾಲ್ತಿಯಲ್ಲಿದ್ದು, ಅದರನ್ವಯ, ವೃತ್ತಿ ಬುನಾದಿ ತರಬೇತಿಯನ್ನು ಯಶಸ್ವಿಯಾಗಿ ಪೂರೈಸಿದ ಅಭ್ಯರ್ಥಿಗಳಿಗೆ ಸದರಿ ನಿಯಮಗಳನ್ವಯ ಮುಂದಿನ ಸ್ಥಳ ನಿಯುಕ್ತಿಗೊಳಿಸಲಾಗುವುದು.

**18. ಗಮನಿಸಬೇಕಾದಮುಖ್ಯಅಂಶಗಳು:**

18.1 ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿದ ಅಂಶಗಳು ಹಾಗೂ ಈ ಅಧಿಸೂಚನೆಯಲ್ಲಿ ಅಂಶಗಳಲ್ಲಿ ಏನಾದರೂ ವ್ಯತ್ಯಾಸ ಕಂಡುಬಂದಲ್ಲಿ, ಸರ್ಕಾರದ ಅಧಿಸೂಚನೆ ಸಂಖ್ಯೆ: FEE 203 FEG 2015, ದಿನಾಂಕ: 06.08.2019 ರ ಕರ್ನಾಟಕ ಅರಣ್ಯ ಇಲಾಖೆ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2019 ರಲ್ಲಿ ನಿಗದಿಪಡಿಸಿರುವ ಮಾನದಂಡಗಳು [ಶಾರೀರಿಕ/ವೈದ್ಯಕೀಯ ಮಾನದಂಡಗಳು ಸೇರಿದಂತೆ] ಅಂತಿಮವಾಗಿರುತ್ತವೆ.

18.2 ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಯು ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ.

18.3 ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮೊದಲು ದೇಹದಾರ್ಢ್ಯತೆಯ ಕುರಿತು ಸದರಿ ಹುದ್ದೆಗೆ ನಿಗದಿಪಡಿಸಿರುವ ಮಾನದಂಡವು ತಮಗೆ ಇರುವ ಕುರಿತು ಖಚಿತಪಡಿಸಿಕೊಂಡು ಅರ್ಜಿಯನ್ನು ಸಲ್ಲಿಸುವುದು.

18.4 ಅಂಗವಿಕಲತೆ ಕೋಟಾದಡಿ **LC – Leprosy Cured, AAV – Acid Attack Victims and MI – Mental Illness ಅಭ್ಯರ್ಥಿಗಳು ಮಾತ್ರ** ಅರ್ಜಿ ಸಲ್ಲಿಸಲು ಅವಕಾಶವಿದ್ದು, ಈ ಅಭ್ಯರ್ಥಿಗಳು ಯಾವುದೇ ವಿಧದ ಅಂಗವೈಕಲ್ಯತೆಯನ್ನು ಹೊಂದಿರಬಾರದು.

18.5 ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಆನ್‌ಲೈನ್ ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ಮತ್ತು ಶುಲ್ಕ ಪಾವತಿಸಿದ ರಶೀದಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳುವುದು.

18.6 ಅಭ್ಯರ್ಥಿಯು ಅರ್ಜಿಯನ್ನು ಭರ್ತಿ ಮಾಡುವಾಗ ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಭ್ಯರ್ಥಿಗಳೇ ಅದಕ್ಕೆ ನೇರ ಮತ್ತು ಸಂಪೂರ್ಣ ಜವಾಬ್ದಾರರಾಗುತ್ತಾರೆ. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ನೀಡಿರುವ ಮಾಹಿತಿ/ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ/ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಆದ ಪ್ರಯುಕ್ತ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡುವಾಗ ಈ ಅಧಿಸೂಚನೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಸರಿಯಾಗಿ ಓದಿ, ಅರ್ಥೈಸಿಕೊಂಡು, ನಂತರ ಅರ್ಜಿಯನ್ನು ಸಮರ್ಪಕವಾಗಿ ಭರ್ತಿ ಮಾಡತಕ್ಕದ್ದು.

18.7 ಅರ್ಜಿ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ.

18.8 ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 19 ಸೇನೆನಿ, 2020, ದಿನಾಂಕ: 12.10.2020 ರಲ್ಲಿ ಅಧಿಸೂಚಿತ ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) (ತಿದ್ದುಪಡಿ) ನಿಯಮಗಳು, 2020 ರ ನಿಯಮ 5(4) ರಂತೆ "(4) ಒಬ್ಬ ಸರ್ಕಾರಿ ನೌಕರನು ಅಥವಾ ಬೇರೆ ಯಾವುದೇ ರಾಜ್ಯ ಸರ್ಕಾರದಲ್ಲಿ ಅಥವಾ ಕೇಂದ್ರ ಸರ್ಕಾರದಲ್ಲಿ ಅಥವಾ ಸಾರ್ವಜನಿಕ ವಲಯದ ಸಂಸ್ಥೆಯೊಂದರಲ್ಲಿ ಉದ್ಯೋಗದಲ್ಲಿರುವ ವ್ಯಕ್ತಿಯು, ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಯೊಂದಕ್ಕೆ ಆತನ ಆಯ್ಕೆ ಅಧಿಸೂಚನೆಗೊಂಡ ಕೂಡಲೇ ಆದರೆ ಅವನಿಗೆ ನೇಮಕಾತಿ ಆದೇಶ ಹೊರಡಿಸುವ ಮುನ್ನ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು ಅವನನ್ನು ಅಂತಹ ಹುದ್ದೆಗೆ ನೇಮಕಾತಿ ಮಾಡಲು ಸಕ್ಷಮವಾದ ಪ್ರಾಧಿಕಾರಕ್ಕೆ ಅದನ್ನು ಹಾಜರುಪಡಿಸದ ಅಥವಾ ಅದನ್ನು 11 ರ ಅನುಸಾರ ಪಡೆದಿದ್ದಾನೆ ಎಂದು ಪರಿಗಣಿತಗೊಳ್ಳದ ಹೊರತು ಆತನು ನೇಮಕಾತಿ ಹೊಂದಲು ಅರ್ಹನಾಗಿರತಕ್ಕದ್ದಲ್ಲ."

18.9 ಯಾವುದೇ ಅಭ್ಯರ್ಥಿಯು ತನ್ನ ಆಯ್ಕೆಗೆ ಸಂಬಂಧಿಸಿದಂತೆ ಬಾಹ್ಯ ಒತ್ತಡ ತಂದಲ್ಲಿ/ತರಲು ಪ್ರಯತ್ನಿಸಿದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಿ, ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು.

18.10 ಯಾವುದೇ ಕೇಂದ್ರ/ರಾಜ್ಯ ಸರ್ಕಾರಿ ಇಲಾಖೆ ಅಥವಾ ಸರ್ಕಾರಿ/ಅರೆ ಸರ್ಕಾರಿ ಸಂಸ್ಥೆ/ಪ್ರಾಧಿಕಾರದ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಾಗುವುದಿಲ್ಲ.

18.11 ಕಾನೂನು ಬಾಹಿರವೆಂದು ಘೋಷಿಸಲಾದ ಸಂಸ್ಥೆ ಸಂಘದ ಸದಸ್ಯರಾಗಿದ್ದರೆ ಅಥವಾ ಇನ್ನಾವುದೇ ರೀತಿಯಲ್ಲಿ ಅಂತಹ ಸಂಸ್ಥೆ ಸಂಘದೊಂದಿಗೆ ನಿಕಟ ಸಂಪರ್ಕ ಹೊಂದಿದ್ದರೆ ಅಂತಹ ವ್ಯಕ್ತಿ ನೇಮಕಾತಿಗೆ ಅರ್ಹರಾಗುವುದಿಲ್ಲ.

18.12 ಅಭ್ಯರ್ಥಿಯು ಸಮಾಜಘಾತುಕ ಕೃತ್ಯಗಳಲ್ಲಿ ತೊಡಗಿ ಅಪರಾಧಿಯಾಗಿದ್ದರೆ ಅಂತಹ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

18.13 ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿಯರನ್ನು/ಪತಿಯರನ್ನು ಹೊಂದಿದ ಪುರುಷ/ಮಹಿಳೆ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

18.14 ಯಾವುದೇ ಅಭ್ಯರ್ಥಿಯು ಕೇಂದ್ರ/ರಾಜ್ಯ ಸರ್ಕಾರ ಅಥವಾ ಸರ್ಕಾರಿ ಸಂಸ್ಥೆಗಳು ನಡೆಸುವ ಯಾವುದೇ ಪರೀಕ್ಷೆಗಳಿಗೆ ಅಥವಾ ಆಯ್ಕೆಗಳಿಗೆ ಹಾಜರಾಗಲು ತಾತ್ಕಾಲಿಕವಾಗಿ/ಖಾಯಂ ಆಗಿ



hReddy

ಬಹಿಷ್ಕರಿಸಲ್ಪಟ್ಟಿದ್ದರೆ (Debarred) ಅಂತಹ ಅಭ್ಯರ್ಥಿಯು ಅರಣ್ಯ ಇಲಾಖೆಯ ಯಾವುದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

18.15 ದುರ್ನಡತೆ:
ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು ಹಾಗೂ ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ಉಪನಿಯಮ 20 ರಂತೆ ಅಪರಾಧಿ ವ್ಯವಹರಣೆಗೆ ಒಳಪಡುವರು. ಅಲ್ಲದೆ, ಆಯ್ಕೆ ಪ್ರಾಧಿಕಾರ ಅಥವಾ ಆಯ್ಕೆ ಪ್ರಾಧಿಕಾರದಿಂದ ಅಧಿಕೃತಗೊಳಿಸಿದ ಅಧಿಕಾರಿಯ ಹಂತದಲ್ಲಿ ಅಂತಹ ಅಭ್ಯರ್ಥಿಯನ್ನು ಕರ್ನಾಟಕ ಅರಣ್ಯ ಇಲಾಖೆಯಲ್ಲಿನ ನೇಮಕಾತಿಗಳಿಗೆ 10 ವರ್ಷಗಳ ಅವಧಿವರೆಗೂ ಅನರ್ಹ (Debar) ಮಾಡಲಾಗುವುದು.

18.16 ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ ಎಸ್‌ಪಿಎಲ್ 04 ಪಿಇಟಿ 2005, ದಿನಾಂಕ 31.03.2006 ರಂತೆ ಅಂಶದಾಯಿ ನಿವೃತ್ತಿ ಯೋಜನೆ (Contributory Pension Scheme) ವ್ಯಾಪ್ತಿಗೆ ಈ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಬದ್ಧರಾಗಿರುತ್ತಾರೆ.

18.17 ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಆಯ್ಕೆಗೆ ಪರಿಗಣಿಸಿರುವ ಅಂಶಗಳ ಬಗ್ಗೆ ವ್ಯತ್ಯಾಸ ಕಂಡುಬಂದಲ್ಲಿ ಅಥವಾ ಆಕ್ಷೇಪಣೆ ಸಲ್ಲಿಕೆಯಾಗಿದಲ್ಲಿ, ನ್ಯಾಯಾಲಯ ಆದೇಶ, ಸರ್ಕಾರದ ನಿರ್ದೇಶನ/ಸುತ್ತೋಲೆಗಳು ಬಂದಲ್ಲಿ, ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿ ಸೂಕ್ತ ಬದಲಾವಣೆ ಮಾಡಿ ಆಯ್ಕೆ ಪಟ್ಟಿ ಪರಿಷ್ಕರಿಸುವ ಸಂಪೂರ್ಣ ಅಧಿಕಾರವನ್ನು ಆಯ್ಕೆ ಪ್ರಾಧಿಕಾರವು ಹೊಂದಿರುತ್ತದೆ.

18.18 ಒಂದುವೇಳೆ ಅಧಿಸೂಚನೆಯಲ್ಲಿ ಮೂದಿಸಿರುವ ಹುದ್ದೆಗಳ ಸಂಖ್ಯೆಯಲ್ಲಿ ಕಡಿತ ಅಥವಾ ಹೆಚ್ಚುವರಿ ಆದಲ್ಲಿಮತ್ತು ಮೀಸಲಾತಿ ವರ್ಗೀಕರಣದಲ್ಲಿ ಏನಾದರೂ ಬದಲಾವಣೆ ಮಾಡಬೇಕಾದ ಅವಶ್ಯಕತೆ ಕಂಡುಬಂದಲ್ಲಿ ಬದಲಾವಣೆ ಮಾಡಲಾಗುವುದು ಮತ್ತು ಬದಲಾದ ವಿವರಗಳ ಮಾಹಿತಿಯನ್ನು ಕರ್ನಾಟಕ ಅರಣ್ಯ ಇಲಾಖೆ ಜಾಲತಾಣ: https://aranya.gov.in/ ನಲ್ಲಿ ಮುಖಪುಟದ ಕೆಳಭಾಗದಲ್ಲಿ "ನೇಮಕಾತಿ" ಶೀರ್ಷಿಕೆಯ ಮೂಲಕ ಪ್ರಕಟಪಡಿಸಲಾಗುವುದು.

18.19 ಅಭ್ಯರ್ಥಿಯು ಅರಣ್ಯ ವೀಕ್ಷಕ ವೃಂದದ ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು, ಸರ್ಕಾರದ ಎಲ್ಲಾ ಕಾಯ್ದೆ, ನಿಯಮ ಮತ್ತು ಅಧಿನಿಯಮಗಳಿಗೆ (Acts / Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದುವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಅವಕಾಶವಿರುವುದಿಲ್ಲ.

18.20 ಅಭ್ಯರ್ಥಿಗಳು ನೇರ ನೇಮಕಾತಿ ಆಯ್ಕೆ ಪ್ರಕ್ರಿಯೆಯ ವಿಷಯದಲ್ಲಿ ಇಲಾಖೆಯೊಂದಿಗೆ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದವಿರುವುದಿಲ್ಲ.

18.21 ಆಯ್ಕೆ ಪ್ರಾಧಿಕಾರ/ನೇಮಕಾತಿ ಪ್ರಾಧಿಕಾರವು ನೇರ ನೇಮಕಾತಿ ಪ್ರಕ್ರಿಯೆಯ ಸಂಬಂಧ ನಿಗದಿಪಡಿಸುವ ದಿನಾಂಕಗಳಂದು ಅಭ್ಯರ್ಥಿಯು ಗೈರುಹಾಜರಾದಲ್ಲಿ ಅಭ್ಯರ್ಥಿಯ ಅಭ್ಯರ್ಥಿತ್ವವು ಸ್ವಯಂಚಾಲಿತವಾಗಿ ರದ್ದಾಗುವುದು. ಈ ಕುರಿತು ಯಾವುದೇ ಪತ್ರ ವ್ಯವಹಾರಗಳಿಗೆ ಅವಕಾಶವಿರುವುದಿಲ್ಲ.

Meddy

18.22 ಅಭ್ಯರ್ಥಿಯು ಆನ್ಲೈನ್ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ನೀಡಿದ ಮೊಬೈಲ್ ಸಂಖ್ಯೆ ಮತ್ತು ಇ-ಮೇಲ್ ಐಡಿಯನ್ನು ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಚಾಲನೆಯಲ್ಲಿರುವಂತೆ ನಿಗಾವಹಿಸತಕ್ಕದ್ದು.

18.23 ಅಭ್ಯರ್ಥಿಯ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಯಾವುದೇ ಸ್ಪಷ್ಟೀಕರಣಕ್ಕೆ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ. ಎಲ್ಲಾ ಕಾನೂನು ವಿವಾದಗಳು ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ವ್ಯಾಪ್ತಿಗೆ ಒಳಪಟ್ಟಿರುತ್ತದೆ.

20.07.2026

ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ/
ಹಾಗೂ
ಆಯ್ಕೆಪ್ರಾಧಿಕಾರ
ಕಲಬುರಗಿ ವೃತ್ತ, ಕಲಬುರಗಿ